ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
EMAIL : dairyadadaari@gmail.com ಸಂಪುಟ: 01 ಸಂಚಿಕೆ: 161
ಬೆಲೆ ರೂ : 2.00
ರಾಯಚೂರು
ಪುಟ: 4
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಗುರುವಾರ: 04-06-2026

## ಡಿಕೆಶಿ ಯುಗಾರಂಭ : ಕರ್ನಾಟಕದ 25ನೇ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕಾರ




**ಬೆಂಗಳೂರು :** ಕಾರ್ಯಕರ್ತರ ಹರ್ಷೋದ್ಗಾರ ಮುಗಿಲು ಮುಟ್ಟಿದ ಸಂಭ್ರಮದ ನಡುವೆ ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ ಅವರು ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಬುಧವಾರ ಪ್ರಮಾಣ ವಚನ ಸ್ವಿಕರಿಸಿದರು.

ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ದಲಿತ ಸಮುದಾಯದ ಪ್ರಭಾವಿ ಮುಖಂಡ ಡಾ ಜಿ ಪರಮೇಶ್ವರ್ ಅವರು ಮಾತ್ರ ಉಪಮುಖ್ಯಮಂತ್ರಿಯಾಗುವ ಅದೃಷ್ಟ ಖುಲಾಯಿಸಿದೆ. ಜೊತೆಗೆ 13 ಮಂದಿ ಸಚಿವರಾಗಿ ಪ್ರಮಾಣವಚನ ಸ್ವಿಕರಿಸಿದರು. ಲೋಕಭವನದ ಗಾಜಿನ ಮನೆಯಲ್ಲಿ ನಡೆದ ಸರಳ ಸಮಾರಂಭದಲ್ಲಿ ನೂತನ ಮುಖ್ಯಮಂತ್ರಿ ಹಾಗೂ ಸಚಿವರಿಗೆ ರಾಜ್ಯಪಾಲ ತಾವರ್ ಚಂದ್ ಗೆಹ್ಲೋಟ್ ಅವರು ಅಧಿಕಾರ ಗೌಪ್ಯತೆ ಬೋಧಿಸಿದರು.

ಡಿ.ಕೆ.ಶಿವಕುಮಾರ್‌ರವರು ವೀರ ಗಂಗಾಧರಜ್ಜ ಅವರ ಹೆಸರನಲ್ಲಿ ಪ್ರಮಾಣವಚನ ಸ್ವಿಕರಿಸಿದರು. ಕೈಯಲ್ಲಿ 2ನೇಪುಟಕ್ಕೆ

## "ಅಂಗನವಾಡಿ ಕಾರ್ಯಕರ್ತೆ ನೇಮಕದಲ್ಲಿ ಅನ್ಯಾಯ ಆರೋಪ"

ಧೈರ್ಯದ ದಾರಿ

**ಮಾನ್ವಿ -:** ತಾಲೂಕಿನ ಚಿಮ್ಲಾಪುರ ಗ್ರಾಮದ ಅಂಗನವಾಡಿ-2 ಕಾರ್ಯಕರ್ತೆ ಹುದ್ದೆಯ 2025-26ನೇ ಸಾಲಿನ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಅರ್ಹ ಅಭ್ಯರ್ಥಿ ಕು.ಶ್ರೀದೇವಿ ತಂದೆ ಹನುಮೇಶ ಅವರಿಗೆ ಅನ್ಯಾಯವಾಗಿದೆ.

ದ್ವಿತೀಯ ಪಿಯುಸಿಯಲ್ಲಿ 471 ಮಾರ್ಕ್ಸ್ ಶೇಕಡಾ 78.50%ರಷ್ಟು ಮಾರ್ಕ್ಸ್ ಪಡೆದು ಆಯ್ಕೆ ಮಾನದಂಡದಲ್ಲಿ ಮುಂಚೂಣಿಯಲ್ಲಿ ಇದ್ದರೂ ನನ್ನ ಆಧ್ಯತೆ ಪರಿಗಣಿಸದೆ
ಇಲಾಖೆಯು ಕೇವಲ ಶೇ.65% ಮಾರ್ಕ್ಸ್ ಗಳಿಸಿದವರನ್ನು ಆಯ್ಕೆ ಮಾಡುವ ಮೂಲಕ ಅಂಗನವಾಡಿ ನೇಮಕದಲ್ಲಿ ಭಾರಿ ಅಕ್ರಮವೆಸಲಾಗಿದೆ ಎಂದು ಗಂಭೀರ ಆರೋಪ ಮಾಡಲಾಗಿದೆ.

ಈ ಕುರಿತು ಜಿಲ್ಲಾಧಿಕಾರಿಗೆ ನೀಡಿರುವ ದೂರಿನಲ್ಲಿ ಶ್ರೀದೇವಿ ಅವರು 471 ಅಂಕಗಳೊಂದಿಗೆ ಶೇ.78.50 ಅಂಕ ಗಳಿಸಿ ಮೆರಿಟ್ ಪಟ್ಟಿಯಲ್ಲಿ ಮುಂಚೂಣಿಯಲ್ಲಿದ್ದಾರೆ. ಆದರೆ ಇಲಾಖೆಯು ಕೇವಲ ಶೇ. 65 ಅಂಕ ಗಳಿಸಿರುವ ಕಡಿಮೆ ಅಂಕದ ಅಭ್ಯರ್ಥಿಯನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲಾಗಿದೆ.

ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಅಥವಾ ಸಾಫ್ಟ್‌ವೇರ್‌ನಲ್ಲಿ ಇಲಾಖೆಯ ಕಡೆಯಿಂದ ಏನಾದರೂ ತಾಂತ್ರಿಕ ದೋಷ ಉಂಟಾಗಿದ್ದರೆ ಉನ್ನತಾಧಿಕಾರಿಗಳು ಅದನ್ನು ಪರಿಶೀಲಿಸಿ




ಸರಿಪಡಿಸಬೇಕು. ತಂತ್ರಜ್ಞಾನದ ಲೋಪದೋಷಗಳನ್ನು ಮುಂದಿಟ್ಟು ಗ್ರಾಮೀಣ ಭಾಗದ ಪ್ರತಿಭಾವಂತ ಅಭ್ಯರ್ಥಿಗೆ ಉದ್ಯೋಗ ವಂಚಿಸುವುದು ಸರಿಯಲ್ಲ ಎಂದು ಶ್ರೀದೇವಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಗಂಭೀರ ಲೋಪದೋಷಗಳನ್ನು ತಕ್ಷಣ ಸರಿಪಡಿಸಿ ಅರ್ಹತೆಯ ಆಧಾರದಮೇಲೆ ನೇಮಕಾತಿ ಆದೇಶ ನೀಡಬೇಕು ಎಂದು ಜಿಲ್ಲಾಧಿಕಾರಿ ಎಸ್ .ಪೂವಿತಾ ಹಾಗೂ ಮಹಿಳಾ ಮತ್ತು ಮಕ್ಕಳ ಇಲಾಖೆ ಉಪನಿರ್ದೇಶಕಿ ಶರಣಮ್ಮ ಅವರಿಗೆ ನೀಡಿರುವ ದೂರಿನಲ್ಲಿ ಒತ್ತಾಯಿಸಿದ್ದಾರೆ.

## ಆಲ್ದಾಳ : ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವಂತೆ ಗ್ರಾಮಸ್ಥರಿಂದ ಮನವಿ



ಧೈರ್ಯದ ದಾರಿ

**ಮಾನ್ವಿ :** ಜಾನೇಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಲ್ದಾಳ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಕೂಡಲೇ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವಂತೆ ಅಲ್ದಾಳ ಗ್ರಾಮಸ್ಥರಿಂದ ಬುಧವಾರ ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಖಲೀದ್ ಅಹಮ್ಮದ್ ಗೆ ಮನವಿ ಸಲ್ಲಿಸಿದರು.

ಕಳೆದ 4-5 ತಿಂಗಳಿನಿಂದ ದಿನನಿತ್ಯ ಕುಡಿಯುವ ನೀರಿನ ಅಭಾವ ಉಂಟಾಗಿದ್ದು. ಇದರಿಂದ ಜನರು ತೀವ್ರ ತೊಂದರೆ ಅನುಭವಿಸುವಂತಾಗಿದ್ದು, ಹತ್ತಿರದ 1 ಕಿ.ಮಿ ಗವಿಗಟ್ಟ ಗ್ರಾಮಕ್ಕೆ ಹೋಗಿ ತರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬಗ್ಗೆ ಹಲವು ಬಾರೀ ಗ್ರಾಮ ಪಂಚಾಯತಿ ಅಧಿಕಾರಿಗಳಿಗೆ ಭೇಟಿ ನೀಡಿದರು. ಈ ಬಗ್ಗೆ ಗಮನ ಹರಿಸಿಲ್ಲ, ಕೂಡಲೇ 2 ದಿನದೊಳಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಬೇಕು ಇಲ್ಲಾವದಲ್ಲಿ ಗ್ರಾಮ ಪಂಚಾಯತಿಗೆ ಬೀಗ ಜಡೆದು ಪ್ರತಿಭಟನೆ ಮಾಡಲಾಗುವುದು ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ದಿನ್ನಿ ಬಸವರಾಜ, ಕೆ.ನರಸಪ್ಪ, ರವಿಕುಮಾರ, ಬಸವರಾಜ, ಗಂಗಣ್ಣಗೌಡ, ಶ್ರೀಧರ ಧಣಿ, ಯಲ್ಲಾರೆಡ್ಡಿ, ಬಸವರಾಜ, ವೀರಯ್ಯ ಸ್ವಾಮಿ, ರಮೇಶ, ಈರಣ್ಣ , ಶಿವಯ್ಯ ತಾತ, ರಾಜಪ್ಪ ಗೌಡ, ರಾಮಣ್ಣ, ಈಶ್ವರ ಹೂಗಾರ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಸಿರವಾರ: ಪೂರ್ಣಗೊಳ್ಳದ ಕಾಮಗಾರಿಯಿಂದ ಸಾರ್ವಜನಿಕರು, ವರ್ತಕರ ಪರದಾಟ



ಧೈರ್ಯದ ದಾರಿ

**ಸಿರವಾರ:** ಪಟ್ಟಣದ ಮುಖ್ಯರಸ್ತೆಯಲ್ಲಿ ಎ.ಪಿ.ಎಂ.ಸಿ (APMC) ಕ್ರಾಸ್‌ನಿಂದ ಸಂಗಪ್ಪ ಕೆನಾಲ್ ವರೆಗೆ ಕೈಗೊಂಡಿರುವ ರಸ್ತೆ ನಿರ್ಮಾಣ ಮತ್ತು ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ವಿಳಂಬವಾಗುತ್ತಿರುವುದು ಸ್ಥಳೀಯ ವರ್ತಕರು ಮತ್ತು ಸಾರ್ವಜನಿಕರಿಗೆ ತೀವ್ರ ತೊಂದರೆಯುಂಟು ಮಾಡಿದೆ.

**ಅಗೆದ ಗುಂಡಿಗಳಲ್ಲಿ ನಿಂತ ಮಳೆನೀರು:** ಅಭಿವೃದ್ಧಿ ಕಾರ್ಯಕ್ಕಾಗಿ ರಸ್ತೆಯುದ್ದಕ್ಕೂ ಅಗೆಯಲಾಗಿರುವ ಹಳ್ಳಗಳು ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಸಂಪೂರ್ಣವಾಗಿ ಜಲಾವೃತಗೊಂಡಿವೆ. ಮಣ್ಣು ಮಿಶ್ರಿತ ನೀರು ಮತ್ತು ಹೂಳು ರಸ್ತೆಯಲ್ಲೆಲ್ಲಾ ಹರಡಿದ್ದು, ವಾಹನ ಸವಾರರು ಸಂಚರಿಸಲು ಹರಸಾಹಸ ಪಡುವಂತಾಗಿದೆ.

**ವರ್ತಕರ ಅಳಲು:** ರಸ್ತೆ ಅಗೆದ ಪರಿಣಾಮ ತಮ್ಮ ಅಂಗಡಿಗಳ ಮುಂಭಾಗದಲ್ಲಿ ದೊಡ್ಡ ಗುಂಡಿಗಳು ಬಿದ್ದಿದ್ದು, ಗ್ರಾಹಕರು ಅಂಗಡಿಗೆ ಪ್ರವೇಶಿಸಲು ಸಾಧ್ಯವಾಗುತ್ತಿಲ್ಲ ಎಂದು ವರ್ತಕರು ಅಳಲು ತೋಡಿಕೊಂಡಿದ್ದಾರೆ.

**ಗ್ರಾಹಕರ ಕೊರತೆ:** ಅಂಗಡಿ ಮುಂಭಾಗ ಕೆಸರು ಮತ್ತು ನೀರು ನಿಂತಿರುವುದರಿಂದ ಗ್ರಾಹಕರು ಅಂಗಡಿಯತ್ತ ಬರಲು ಹಿಂದೇಟು ಹಾಕುತ್ತಿದ್ದಾರೆ, ಇದರಿಂದಾಗಿ ದೈನಂದಿನ ವಹಿವಾಟಿಗೆ ತೀವ್ರ ಹೊಡೆತ ಬಿದ್ದಿದೆ.
ಅಪಘಾತದ ಭೀತಿ: ದ್ವಿಚಕ್ರ ವಾಹನ ಸವಾರರು ನಿಂತ ನೀರಿನಲ್ಲಿ ಗುಂಡಿ ಕಾಣದೆ ಬಿದ್ದು ಗಾಯಗೊಂಡಿರುವ ನಿದರ್ಶನಗಳೂ ಇವೆ.

**ಆಡಳಿತ ಮಂಡಳಿಯ ನಿರ್ಲಕ್ಷ್ಯ:** "ಕಾಮಗಾರಿಯನ್ನು ಪ್ರಾರಂಭಿಸಿದವರು ಅದನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕಿತ್ತು. ಮಳೆಗಾಲ ಆರಂಭವಾಗುವ ಮುನ್ನವೇ ಎಚ್ಚೆತ್ತುಕೊಳ್ಳಬೇಕಿದ್ದ ಗುತ್ತಿಗೆದಾರರು ಮತ್ತು ಸ್ಥಳೀಯ ಆಡಳಿತ ಮಂಡಳಿ ಕೇವಲ ಗುಂಡಿಗಳನ್ನು ಅಗೆದು ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ," ಎಂದು ಸ್ಥಳೀಯರು ಆರೋಪಿಸಿದ್ದಾರೆ.

ತಕ್ಷಣವೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಬಾಕಿ ಉಳಿದಿರುವ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಮತ್ತು ಸದ್ಯ ಉಂಟಾಗಿರುವ ರಸ್ತೆ ಅವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ನಾಗರಿಕರು ಮತ್ತು ವರ್ತಕರು ಒತ್ತಾಯಿಸಿದ್ದಾರೆ.

## ನರೇಗಾ ಕೂಲಿ ಕಾರ್ಮಿಕರಿಗೆ ಉಚಿತ ಅರೋಗ್ಯ ಶಿಬಿರ: ದೀಪಾ ಅರಳಿಕಟ್ಟಿ



ಧೈರ್ಯದ ದಾರಿ

**ಮಾನ್ವಿ :** ತಾಲೂಕಿನ ಕಪಗಲ್ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಹಮ್ಮಿಕೊಂಡ ಉಚಿತ ಅರೋಗ್ಯ ಶಿಬಿರವನ್ನು ತಾಲೂಕು ಪಂಚಾಯಿತಿ ಪಂಚಾಯಿತಿ ರಾಜ್ ಸಹಾಯಕ ನಿರ್ದೇಶಕರಾದ ದೀಪಾ ಅರಳಿಕಟ್ಟಿ ಚಾಲನೆ ನೀಡಿ ಮಾತನಾಡಿ ಕೂಲಿ ಕಾರ್ಮಿಕರ ಉತ್ತಮ ಆರೋಗ್ಯಕ್ಕಾಗಿ ನರೇಗಾ ಕೂಲಿ ಕಾರ್ಮಿಕರಿಗೆ ಕಾಮಗಾರಿ ಸ್ಥಳದಲ್ಲಿಯೇ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆಯನ್ನು ಆರೋಗ್ಯ ಇಲಾಖೆಯಿಂದ ನೀಡಲಾಗುತ್ತಿದೆ ಹೆಚ್ಚಿನ ಚಿಕಿತ್ಸೆ ಅಗತ್ಯವಿದಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ತಜ್ಞವೈದ್ಯರಿಂದ ಚಿಕಿತ್ಸೆ ನೀಡಲಾಗುವುದು ಎಂದು ತಿಳಿಸಿದರು.

ರಾಯಚೂರು ಜಿಲ್ಲಾ ಪಂಚಾಯತ್ ಎ.ಡಿ.ಪಿ.ಸಿ. ಮಲ್ಲಮ್ಮ ಮಾತನಾಡಿ ವಲಸೆ ಯಾಕ್ರಿ ನಿಮ್ಮೂರಲ್ಲೆ ಉದ್ಯೋಗ ಖಾತರಿ ಹಾಗೂ ಸ್ತ್ರೀ ಚೇತನ ಅಭಿಯಾನದಡಿ ಗ್ರಾಮ ಪಂಚಾಯಿತಿ ಯಿಂದ ಸಮಾಮ ಕೇಲಸಕ್ಕೆ ಸಮಾನ ವೇತನ ನೀಡಲಾಗುತ್ತಿದೆ. ಸಾಮಾಜಿಕ ಭದ್ರತೆ ಕಲ್ಪಿಸಲು ನರೇಗ ಯೋಜನೆಯಡಿ 65 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು, ವಿಶೇಷ ಚೇತನರು ಹಾಗೂ ಗರ್ಭಿಣಿಯರಿಗೆ ಶೇ. 50 ಕೆಲಸ ಮಾಡಿದರೂ ಕೂಡ ಪೂರ್ತಿ ಪ್ರಮಾಣದ ಕೂಲಿ ನೀಡಲಾಗುತ್ತದೆ. ತಾವು ನಿರ್ವಸುವ ಕೆಲಸದ ಅಧಾರದ ಮೇಲೆ ಕೂಲಿ ನೀಡಲಾಗುವುದು ಮೇಟಿಗಳು ಎನ್. ಎಂ. ಎಂ .ಎಸ್ ತಂತ್ರಾಂಶದಲ್ಲಿ ಮುಖ ಚಹಾರೆ ಮೂಲಕ ಕಡ್ಡಾಯವಾಗಿ ಎರಡು ಬಾರಿ ಹಾಜರಾತಿ ದಾಖಲಿಸಬೇಕು ಎಂದು ತಿಳಿಸಿದರು.
ಉಚಿತ ಆರೋಗ್ಯ ಶಿಬಿರದಲ್ಲಿ ಕೂಲಿ ಕಾರ್ಮಿಕರಿಗೆ ಮಧುಮೇಹ.ರಕ್ತದ ಒತ್ತಡ,ಕೆಮ್ಮು,ಜ್ವರ ಸೇರಿದಂತೆ ವಿವಿಧ ಕಾಯಿಲೆಗಳಿಗೆ ಅಗತ್ಯ ಚಿಕಿತ್ಸೆ ನೀಡಲಾಯಿತು.ಕೂಲಿ ಕಾರ್ಮಿಕರಿಗೆ ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಮತ್ತು ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಯಿತು.
ಕಪಗಲ್ ಸಮುದಾಯಿಕ ಅರೋಗ್ಯ ಅಧಿಕಾರಿ ಹನುಮಂತಿ, ಪ್ರಾಥಮಿಕ ಸುರಕ್ಷ ಅಧಿಕಾರಿ ಶಿಲ್ಪಾಕಲಾ ತಾಲ್ಲೂಕ ಐ.ಇ.ಸಿ.ಸಂಯೋಜಕ ಈರೇಶ, ತಾಲ್ಲೂಕ ತಾಂತ್ರಿಕ ಸಂಯೋಜಕ ಚಿದಾನಂದ,ಬಿಎಫ್ಟಿ ಸಿದ್ದರಾಮ ಸೇರಿದಂತೆ ಆರೋಗ್ಯ ಇಲಾಖೆಯ ಆಶಾಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ನರೇಗಾ ಕೂಲಿ ಕಾರ್ಮಿಕರು ಇದ್ದರು.

# ವಿಶ್ವ ಬೈಸಿಕಲ್ ದಿನಾಚರಣೆ: ರಾಯಚೂರಿನಲ್ಲಿ ಸೈಕಲ್ ಜಾಥಾ ಮೂಲಕ ಆರೋಗ್ಯ ಜಾಗೃತಿ



ಧೈರ್ಯದ ದಾರಿ

**ರಾಯಚೂರು .:**ನಗರದಲ್ಲಿ ದಿನಾಂಕ 3/ 6/3026ರಂದು ವಿಶ್ವ ಸೈಕಲ್ ದಿನಾಚರಣೆ. ಈ ವಿಶ್ವ ಬೈಸಿಕಲ್ ದಿನಾಚರಣೆಯ ಕಾರ್ಯಕ್ರಮವನ್ನು ರಾಯಚೂರ ಸೈಕಲ್ ಅಸೋಸಿಯೇಷನ್ ಸಮಿತಿ ವತಿಯಿಂದ ಬೆಳಗ್ಗೆ 7:00ಗೆ ಆ ಯೋಜನೆ ಮಾಡಲಾಗಿತ್ತು . ಈ ಸೈಕಲ್ ಮ್ಯಾರಥಾನ್ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಡಾಕ್ಟರ್ ಬಸವರಾಜ್ ಎಂ ಪಾಟೀಲ್ ಮಾತನಾಡುತ್ತಾ ಇಂದು ನಮ್ಮ ರಾಯಚೂರ ನಗರದಲ್ಲಿ ವಿಶ್ವ ಬೈಸಿಕಲ್ ದಿನಾಚರಣೆ ಅಂಗವಾಗಿ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ .ಇಂದು ನಾವು ಸೈಕಲ್ ಮ್ಯಾರಥಾನ್ ಕೃಷಿ ವಿಶ್ವವಿದ್ಯಾಲಯದ ಬಸವ ನರ್ಸಿಂಗ್ ಆಸ್ಪತ್ರೆಯಿಂದ ಪ್ರಾರಂಭವಾಗಿ ಬಸಬೀಶ್ವರ ವೃತ್ತದ ಮೂಲಕ ಗಾಂಧಿ ವೃತ್ತ ತೀನ ಕಂದಿಲ್ ಆಲ್ ಇಂಡಿಯಾ ರೇಡಿಯೋ .ಡಾ.ಬಾಬು ಜಗಜೀವನ ರಾಮ್ ವೃತ ಡಾ. ಬಿ ಆರ್ ಅಂಬೇಡ್ಕರ್ ವೃತ್ತದ ಮೂಲಕ ಬಸ್ವೇಶ್ವರ ವೃತ್ತವನ್ನು ಸೇರಿ ಸೈಕಲ್ ಜಾತ ಕಾರ್ಯಕ್ರಮವನ್ನು ಮಾಡಲಾಯಿತು .ನಾವು ನಮ್ಮೆಲ್ಲ ಸ್ನೇಹಿತರ ನಮ್ಮ ಸಂಸ್ಥೆಯ ಪದಾಧಿಕಾರಿಗಳ ಸಂಗಡ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ ಸೈಕಲ್.ಬಳಸುವುದರಿಂದ ಅಥವಾ ಬೆಳಗಿನ ಜಾವ ಇದನ್ನು ತೆಗೆದುಕೊಂಡು ಹೋಗಿ ಅಭ್ಯಾಸ ಮಾಡುವುದರಿಂದ ದೈಹಿಕವಾಗಿ ಮತ್ತು ಮಾನಸಿಕವಾಗಿ ಗಟ್ಟಿಯಾಗುತ್ತೇವೆ ನಮ್ಮ ಸಂಸ್ಥೆಯ ಪದಾಧಿಕಾರಿಗಳು ನೂರಾರು ಕಿಲೋಮೀಟರು ಸೈಕಲ್ ಹೊಡಿವ ಅಭ್ಯಾಸವನ್ನು ರೂಡಿಸಿಕೊಂಡಿದ್ದಾರೆ ಇದು ಉತ್ತಮ ಆರೋಗ್ಯಕ್ಕೆ ಸಹಾಯಕಾರಿಯಾಗುತ್ತದೆ ದಿನನಿತ್ಯ ಬೆಳಗಿನ ಜಾವದಲ್ಲಿ ನಾನು ನನ್ನ ಸ್ನೇಹಿತರು ದಿನಾಲು ಹತ್ತಿಪ್ಪತ್ತು ಕಿಲೋಮೀಟರು ಸೈಕಲ್ ಮೂಲಕ ದೈಹಿಕ ವ್ಯಾಯಾಮನ ಮಾಡುತ್ತೇವೆ ಇಂದು ನಮ್ಮ ಕರಿಯ ಮೇರಿಗೆ ಬಂದ ಎಲ್ಲ ನಮ್ಮ ಸ್ನೇಹಿತರಿಗೆ ವಂದನೆಗಳನ್ನು ತಿಳಿಸುತ್ತೇನೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ವಿಭಾಗದ ಜಿಲ್ಲಾ ಸಂಚಾಲಕರಾದ ಡಾ. 2018ರಿಂದ ವಿಶ್ವಸಂಸ್ಥೆಯು ಪ್ರತಿವರ್ಷ ಜೂನ್ ಮೂರರಂದು ವಿಶ್ವ ಬೈಸಿಕಲ್ ದಿನಾಚರಣೆ ಎಂದು ಆಚರಣೆ ಮಾಡಲಾಗುತ್ತದೆ .ಸೈಕಲ್ ಪರಿಸರಸ್ನೇಹಿ ಸಾರಿಗೆ ಸಾಧನವಾಗಿದೆ .ಇದನ್ನು ಬಳಕೆ ಮಾಡುವುದರ ಮೂಲಕ ವ್ಯಕ್ತಿ ದೈಹಿಕವಾಗಿ ಗಟ್ಟಿಯಾಗುತಾನೆ. ಉತ್ತಮ ಪರಿಸರ ನಿರ್ಮಾಣ ಮಾಡ್ಲಿಕ್ಕೆ ಸಹಕಾರಿಯಾಗುತ್ತದೆ .ಆರ್ಥಿಕ ಉಳಿತಾಯಕ್ಕೆ ಮತ್ತು ತೂಕಲ್ಲಿಸಲು ಇದು ತುಂಬಾ ಸಹಾಯಕಾರಿಯಾಗಿದೆ. ಸೈಕಲ್ ಕೆಲವರು ವ್ಯಾಯಾಮಕ್ಕಾಗಿ ಕೆಲವರು ವ್ಯಾಪಾರಕ್ಕಾಗಿ .ಕೆಲವರು ಶಾಲಾ–ಕಾಲೇಜಿಗೆ ಹೋಗಲು. ಕೆಲವರು ತಮ್ಮ ದಿನ ನಿತ್ಯ ಜೀವನದ ಆರಂಭವನ್ನು ಸೈಕಲ್ ಮೂಲಕ ಮಾಡುತ್ತಾರೆ. ಸೈಕಲ್ ಬಡವರ ಪ್ಲೇನ್ ಎಂದರೆ ತಪ್ಪಾಗಲಾರದು ಎಂದು .ಡಾ. ಬಿರಾದಾರ ಹೇಳಿದರು. ಈ ಸಂದರ್ಭದಲ್ಲಿ. ಡಾ ಜಯಪ್ರಕಾಶ್ ಬೆಟ್ಟದೂರು .ಡಾ. ಸಕಲೇಶ ಬೆಟ್ಟದೂರು. ಡಾ. ಸುನೀಲ. ಡಾ. ಶರಣಗೌಡ .ಸಂದೀಪ್ ಕಲ್ಲೂರ್. ಸೋಮನಾಥ ರೆಡ್ಡಿ .ಚನ್ನಬಸವ ಕಾರ್ತಿಕ್ .ವಿಜಯ್ .ಸುರೇಶ್. ವೀರೇಂದ್ರ ರಾಮಪುರ ..ಗುರು ಚಿತ್ರ ವೀರೇಶ ಎನ ಸೇರಿದಂತೆ ರಾಯಚೂರ ಸೈಕಲ್ ಅಸೋಸಿಯೇಷನ್ ನ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# "ಹುಲಿಗೆಮ್ಮ ದೇವಸ್ಥಾನದ ಬೆಳ್ಳಿ ಆಭರಣಗಳ ಕಳ್ಳತನ"

ಧೈರ್ಯದ ದಾರಿ

**ಪೋತ್ನಾಳ –:** ಸಮೀಪದ ಧೋತರಬಂಡಿ ಗ್ರಾಮದ ಬಸ್ ನಿಲ್ದಾಣದ ಎದುರಿಗೆ ಇರುವ ನೂತನ ಹುಲಿಗೆಮ್ಮ ದೇವಿ ದೇವಸ್ಥಾನದ ಬೀಗ ಮುರಿದು ಲಕ್ಷಾಂತರ ರೂಪಾಯಿ ಮೌಲ್ಯದ ದೇವಿಯ ಬೆಳ್ಳಿ ಆಭರಣಗಳು ಹಾಗೂ ಪೂಜಾ ಸಾಮಗ್ರಿಗಳನ್ನು ಸೋಮವಾರ ಬೆಳಗಿನ ಜಾವಾ ಕಳ್ಳರು ದೋಚಿದ ಘಟನೆ ನಡೆದಿದೆ.





ಮಧ್ಯ ರಾತ್ರಿ ಅಥವಾ ನಸುಕಿನಲ್ಲಿ ದೇವಸ್ಥಾನದ ಮುಖ್ಯ ಬಾಗಿಲ ಬೀಗ ಮುರಿದು ಒಳನುಗ್ಗಿದ ಕಳ್ಳರು ಗರ್ಭಗುಡಿಯಲ್ಲಿ ದೇವಿಗೆ ಅಲಂಕಾರಸಿದ್ದ 51 ತೊಲೆಯ ಬೆಳ್ಳಿ ಮುಖ ಕವಚ, ಹಸ್ತ ಕವಚಗಳು, 15 ಸಾವಿರ ಬೆಲೆಯ 2 ಮಾಂಗಲ್ಯ ಸರಗಳು, 2 ಲಿಂಗದ ಕಾಯಿಗಳು ಹಾಗೂ ಪೂಜೆಗೆ ಬಳಸುತ್ತಿದ್ದ ತಾಮ್ರದ ಕೊಡ ದೋಚಿ ಪರಾರಿಯಾಗಿದ್ದಾರೆ.

ಸೋಮವಾರ ಮುಂಜಾನೆ ಪೂಜೆ ಸಲ್ಲಿಸಲು ಅರ್ಚಕರು ಬಂದಾಗ ಕಳ್ಳತನದ ವಿಷಯ ಬೆಳಕಿಗೆ ಬಂದಿದೆ. ತಕ್ಷಣವೇ ಈ ಕುರಿತು ಸ್ಥಳೀಯ ಕವಿತಾಳ ಪೊಲೀಸ್ ಠಾಣೆಗೆ ಮಾಹಿತಿ ನೀಡಲಾಗಿದೆ.

ಇತ್ತೀಚೆಗೆ ಜಾತ್ರೆ ನಡೆದ ಹಿನ್ನೆಲೆಯಲ್ಲಿ ಕಾಣಿಕೆ ಹುಂಡಿಯನ್ನು ಖಾಲಿ ಮಾಡಿಲಾಗಿದ್ದ ಪರಿಣಾಮ ಅದನ್ನು ಅಲ್ಲಿಯೇ ಬಿಟ್ಟಿದಾರೆ ಎಂದು ಗ್ರಾಮಸ್ಥರು ಮಾಹಿತಿ ನೀಡಿದ್ದಾರೆ.

ಘಟನಾ ಸ್ಥಳಕ್ಕೆ ಕವಿತಾಳ ಪೊಲೀಸ್ ಠಾಣೆಯ ಪಿಎಸ್ಐ ಗುರುಚಂದ್ರ ಯಾದವ್ ಅವರು ಭೇಟಿ ನೀಡಿ ಕಳ್ಳತನ ಕುರಿತು ಅರ್ಚಕರು ಹಾಗೂ ಗ್ರಾಮಸ್ಥರಿಂದ ಮಾಹಿತಿ ಪಡೆದು ಪರಿಶೀಲನೆ ಮಾಡಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಪೆಟ್ರೋಲ್, ಡೀಸೆಲ್ ಸಾಕಷ್ಟು ದಾಸ್ತಾನು ಲಭ್ಯ: ತಹಶೀಲ್ದಾರ್ ವರ್ಮಾ

**ರಾಯಚೂರು ಜೂನ್ 03:** ರಾಯಚೂರು ತಾಲೂಕಿನಾದ್ಯಂತಹ ಪೆಟ್ರೋಲ್ ಬಂಕ್‌ಗಳಲ್ಲಿ ಹಾಗೂ ಗ್ಯಾಸ್ ಏಜೆನ್ಸಿಗಳಲ್ಲಿ ಸಾಕಷ್ಟು ಮಟ್ಟದ ದಾಸ್ತಾನು ಸೌಲಭ್ಯವಿದ್ದು, ಸಾರ್ವಜನಿಕರು, ಗ್ರಾಹಕರು, ವಾಹನ ಮಾಲೀಕರು ಯಾವುದೇ ರೀತಿಯಾಗಿ ಆತಂಕಪಡದಂತೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಯಾರಾದರೂ ಪೆಟ್ರೋಲ್, ಡೀಸೆಲ್ ಬಂಕ್ ಅಥವಾ ಗ್ಯಾಸ ಏಜೇನ್ಸಿ ಮಾಲಿಕರು ಅಥವಾ ವಿತರಕರು ಎಲ್.ಪಿ.ಜಿ ಗ್ಯಾಸ್, ಪೆಟ್ರೋಲ್ ಅಥವಾ ಡೀಸೆಲ್ಗಳನ್ನು ಮಾರುಕಟ್ಟೆ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ಏಜೇನ್ಸಿ ಮಾಲಿಕರು ಅಥವಾ ವಿತರಕರ ವಿರುದ್ದ ಶಿಸ್ತು ಕ್ರಮ ಕೈಗೊಂಡು ಮಾರಾಟ ಪರವಾನಗಿಯನ್ನು ರದ್ದು ಮಾಡಲಾಗುವುದು.

ಪೆಟ್ರೋಲ್ ಬಂಕ್ ಅಥವಾ ಗ್ಯಾಸ್ ಏಜೇನ್ಸಿ ಮಾಲಿಕರು/ವಿತರಕರು ನೋ ಸ್ಟಾಕ್ ಎಂದು ಬಿತ್ತಿ ಪತ್ರವನ್ನು ಅಂಟಿಸಬಾರುದು. ಮುಂಜಾಗ್ರತವಾಗಿ ದಾಸ್ತಾನು ಸಂಗ್ರಹಣೆಯನ್ನು ಪರಿಗಣಿಸಿ ಎಲ್.ಪಿ.ಜಿ ಗ್ಯಾಸ್/ ಪೆಟ್ರೋಲ್, ಡೀಸೆಲ್ ಖರೀದಿ ಮಾಡಿ ಸಾರ್ವಜನೀಕರಿಗೆ ಮಾರಾಟ ಮಾಡುವುದು.

ಪೆಟ್ರೋಲ್ ಅಥವಾ ಡೀಸೆಲ್ ನಲ್ಲಿ ಯಾವುದೇ ರೀತಿ ಅಭಾವ ಇರುವುದಿಲ್ಲ. ಯಾವುದೇ ರೀತಿಯಾಗಿ ಕೃತಕವಾಗಿ ಅಭಾವ ಸೃಷ್ಟಿಸುವ ಸಾಮಾಜಿಕ ಜಾಲತಾಣದಲ್ಲಿ ಬರುವಂತಹ ಸಂದೇಶಗಳಿಗೆ ಕಿವಿಕೊಡದೇ ನಿಶ್ಚಿಂತೆಯಾಗಿ ಇರಬೇಕೆಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೋದಯ ಫೀಡರ್ ವ್ಯಾಪ್ತಿಯಲ್ಲಿ ಜೂನ್ 05ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜೂನ್ 03:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ನವೋದಯ ಫೀಡರ್ ವ್ಯಾಪ್ತಿಗೆ ಬರುವ ಎಲ್ಲಾ ಏರಿಯಾಗಳಲ್ಲಿ ಮರಗಳನ್ನು ಕತ್ತರಿಸಲು ಹಾಗೂ ಜಿ.ಪಿ.ಎಸ್ ಮಾಡುವ ಪ್ರಯುಕ್ತ ಜೂನ್ 05ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1.30ಗಂಟೆಗೆ ಮಾನಸ ನಗರ, ರೇಸ್ ಕಾನ್ಸೆಪ್ಟ್ ಸ್ಕೂಲ್, ಅನುಷಾ ನಗರ, ಭರತ್ ನಗರ, ನವೋದಯ ಮೆಡಿಕಲ್ ಕಾಲೇಜ್, ದೀನನಾಥ ಕಾಲೋನಿ, ಸಿದ್ದನಾಥ ಕಾಲೋನಿ, ಆರ್.ಟಿ.ಓ ಆಫೀಸ್, ಫೊರೆಸ್ಟ್ ಆಫೀಸ್, ಕೆ.ಎಸ್.ಆರ್.ಸಿ.ಟಿ, ವರ್ಕ್ ಶಾಪ್, ಯರಗೇರಾ ಲೇಔಟ್, ಸತ್ಯನಾಥ ಕಾಲೋನಿ, ಕೆ.ಡಬ್ಲೂ.ಟಿ ಸ್ಕೂಲ್, ಅಶೋಕ ನಗರ, ಧನಲಕ್ಷ್ಮೀ ಲೇಔಟ್, ಮರಿಯಮ್ಮನ ಟೆಂಪಲ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಭ್ರಮದ ಶಾಲಾ ಪ್ರಾರಂಭೋತ್ಸವ



**ಗದಗ,ಜೂ3:** ಹೊಸ ಶೈಕ್ಷಣಿಕ ವರ್ಷದ ಆರಂಭವನ್ನು ಸ್ಮರಣೀಯವಾಗಿಸುವ ಉದ್ದೇಶದಿಂದ ಗದಗ ಜಿಲ್ಲೆಯ ಗದಗ ತಾಲೂಕಿನ ಅಸುಂಡಿಯ ಕುವೆಂಪು ಶತಮಾನೋತ್ಸವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾರಂಭೋತ್ಸವ ಕಾರ್ಯಕ್ರಮ ಅತ್ಯಂತ ಅದ್ದೂರಿಯಾಗಿ ಹಾಗೂ ಸಂಭ್ರಮದಿಂದ ಜರುಗಿತು. ಶಾಲೆಯ ಮೊದಲ ದಿನವೇ ಮಕ್ಕಳಲ್ಲಿ ಕಲಿಕೆಯ ಬಗ್ಗೆ ಆಸಕ್ತಿ ಮತ್ತು ಉತ್ಸಾಹ ಮೂಡಿಸುವ ಉದ್ದೇಶದಿಂದ ವಿವಿಧ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳ ಭವ್ಯ ಮೆರವಣಿಗೆ ನಡೆಸಲಾಯಿತು. ಎತ್ತಿನಗಾಡಿ ಹಾಗೂ ಟ್ರಾ ?ಯಕ್ಟರ್‌ಗಳಲ್ಲಿ ಮಕ್ಕಳನ್ನು ಕೂರಿಸಿಕೊಂಡು ಗ್ರಾಮದಲ್ಲಿ ಮೆರವಣಿಗೆ ನಡೆಸಿ ಶಾಲೆಗೆ ಕರೆತರಲಾಯಿತು. ಮೆರವಣಿಗೆಯುದ್ದಕ್ಕೂ ಗ್ರಾಮಸ್ಥರು ಮಕ್ಕಳನ್ನು ಹರ್ಷೋದ್ಗಾರಗಳೊಂದಿಗೆ ಸ್ವಾಗತಿಸಿದರು.

ಶಾಲೆಯ ಮುಖ್ಯ ದ್ವಾರದಲ್ಲಿ ಅತಿಥಿಗಳು ಹಾಗೂ ಶಿಕ್ಷಕರು ಸೇರಿ ಮಕ್ಕಳ ಮೇಲೆ ಪುಷ್ಪವೃಷ್ಟಿ ಮಾಡುವ ಮೂಲಕ ಶಾಲೆಗೆ ಆತ್ಮೀಯವಾಗಿ ಬರಮಾಡಿಕೊಂಡರು. ಮಕ್ಕಳಿಗಾಗಿ ವಿಶೇಷವಾಗಿ ನಿರ್ಮಿಸಲಾಗಿದ್ದ ಸೆಲ್ಫಿ ಕಾರ್ನರ್ ವಿದ್ಯಾರ್ಥಿಗಳು ಮತ್ತು ಪಾಲಕರ ಗಮನ ಸೆಳೆಯಿತು.

ಶಾಲಾರಂಭೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕಾಗಿದ್ದು, ಸರ್ಕಾರ ಮತ್ತು ಸಂವಿಧಾನದ ಆಶಯವೂ ಎಲ್ಲ ಮಕ್ಕಳಿಗೆ ಗುಣಮಟ್ಟದ ಹಾಗೂ ಸಮಾನ ಶಿಕ್ಷಣ ಒದಗಿಸುವುದಾಗಿದೆ ಎಂದು ಹೇಳಿದರು.

ಮಕ್ಕಳಿಗೆ ಸುರಕ್ಷಿತ, ಸಂತೋಷದಾಯಕ ಮತ್ತು ಪ್ರೇರಣಾದಾಯಕ ವಾತಾವರಣದಲ್ಲಿ ಶಿಕ್ಷಣ ದೊರೆಯಬೇಕು. ಶಾಲೆಯ ಮೊದಲ ದಿನವೇ ಮಕ್ಕಳಲ್ಲಿ ಶಾಲೆಯ ಬಗ್ಗೆ ಪ್ರೀತಿ ಮತ್ತು ಅಭಿಮಾನ ಮೂಡಬೇಕು. ಅದಕ್ಕಾಗಿ ಪಾಲಕರು, ಶಿಕ್ಷಕರು ಹಾಗೂ ಶಾಲಾಭಿವೃದ್ಧಿ ಸಮಿತಿ ಸದಸ್ಯರು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಶಾಲಾರಂಭದ ದಿನ ಮೂಡುವ ಸಂತಸ ಮಕ್ಕಳಲ್ಲಿ ವರ್ಷಪೂರ್ತಿ ಕಲಿಕೆಯ ಉತ್ಸಾಹವನ್ನು ಉಳಿಸಬಲ್ಲದು? ಎಂದು ಹೇಳಿದರು.

ಪ್ರತಿ ಶೈಕ್ಷಣಿಕ ವರ್ಷದ ಚಟುವಟಿಕೆಗಳನ್ನು ಪೂರ್ವಯೋಜಿತವಾಗಿ ರೂಪಿಸಿ ಅನುಷ್ಠಾನಗೊಳಿಸುವುದೇ ಶಾಲಾರಂಭೋತ್ಸವದ ಪ್ರಮುಖ ಉದ್ದೇಶವಾಗಿದೆ. ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು, ಸರ್ಕಾರಿ ಶಾಲೆಗಳು ಇಂದು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆ ಇಲ್ಲ ಎಂಬುದನ್ನು ಸಮಾಜ ಅರಿಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗದಗ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ ಭಾವಿಕಟ್ಟಿ, ಡಿ.ವೈ.ಪಿ.ಸಿ ರವಿ ಪ್ರಕಾಶ, ಪ್ರೌಢ ಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ಬಿ.ಎಫ್. ಪೂಜಾರ, ಕ.ಪ್ರೌ.ಶಿ. ಸಂಘದ ಅಧ್ಯಕ್ಷ ವಿ.ಎಮ್. ಹಿರೇಮಠ, ತಾಲೂಕು ಪ್ರೌಢ ಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ರವಿರಾಜ ಪವಾರ, ವಿಷಯ ಪರಿವಿಕ್ಷಕರು ಶ್ರೀಮತಿ ಗೀತಾ ಕುಲಕರ್ಣಿ, ಅಸುಂಡಿ ಕಆಔ ಎಮ್.ಡಿ ಹೊಸಮನಿ, ಪ.ಜಾ / ಪ.ಪಂ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಫ್. ಕಲಕುಂಬಿ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಹರ್ತಿ ಸಿ.ಆರ್.ಪಿ ಶ್ರೀಮತಿ ಶೈಲಜಾ ಮಟ್ಟಿ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಡಾ.ಬಸವರಾಜ .ವ್ಹಿ.ಬಳ್ಳಾರಿ, ಅಸುಂಡಿ ಗ್ರಾಮ ಪಂಚಾಯಿತಿ ಆಡಳಿತಧಿಕಾರಿ ಎಚ್.ವೈ. ಹೊನ್ನಿ ನಾಯ್ಕರ, ಶಿಕ್ಷಣ ಪ್ರೇಮಿ ಸೋಮರೆಡ್ಡಿ ರಾಮೇನಳ್ಳಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಶಿವಾನಂದ ಕರಿಗಾರ, ಮಾಜಿ ಎಸ್.ಡಿ.ಎಂ.ಸಿ ಅಧ್ಯಕ್ಷ ಫಕಿರೆಡ್ಡಿ ಮಾಡಳ್ಳಿ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ತಾಜುದ್ದೀನ ಓಲೇಕಾರ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಶ್ರೀಮತಿ ರೇಖಾ ತಿಮ್ಮನಗೌಡ್ರ, ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಗ್ರಾಮಸ್ಥರು, ಪಾಲಕರು, ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಂಬೇಡ್ಕರ್ ಸಮ್ಮೇಳನ ರದ್ದು: ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರ ಅಮಾನತಿಗೆ ಬಿಎಸ್‌ಪಿ ಆಗ್ರಹ



**ಬೀದರ್:** ಕರ್ನಾಟಕ ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2026ರ ಮಾರ್ಚ್ 14 ಮತ್ತು 15ರಂದು ಬೀದರ್ ಜಿಲ್ಲೆಯಲ್ಲಿ ಆಯೋಜಿಸಲು ಉದ್ದೇಶಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅಂತರರಾಷ್ಟ್ರೀಯ ಮಟ್ಟದ ಸಮ್ಮೇಳನ ರದ್ದಾಗಿರುವ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರನ್ನು ಕೂಡಲೇ ಅಮಾನತುಗೊಳಿಸಬೇಕು ಎಂದು ಬಹುಜನ ಸಮಾಜ ಪಕ್ಷ (ಬಿಎಸ್‌ಪಿ) ಆಗ್ರಹಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ, ಸರ್ಕಾರ ವಿಶೇಷ ಅನುದಾನ ಬಿಡುಗಡೆ ಮಾಡಿ ಸಮ್ಮೇಳನ ಆಯೋಜನೆಗೆ ಆದೇಶ ನೀಡಿದ್ದರೂ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ನಿರ್ಲಕ್ಷ್ಯ, ಅವ್ಯವಸ್ಥೆ ಹಾಗೂ ಸಮರ್ಪಕ ಮೇಲ್ವಿಚಾರಣೆಯ ಕೊರತೆಯಿಂದ ಕಾರ್ಯಕ್ರಮದ ರೂಪುರೇಷೆಗಳನ್ನು ಹಾಳುಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಅಂಬೇಡ್ಕರ್ ಅವರ ಚಿಂತನೆಗಳು, ಸಂವಿಧಾನ ಮತ್ತು ದೇಶಕ್ಕೆ ನೀಡಿದ ಕೊಡುಗೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ಈ ಸಮ್ಮೇಳನವನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಆಯೋಜಿಸಲು ಸರ್ಕಾರ ನಿರ್ಧರಿಸಿತ್ತು. ಆದರೆ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಸಮ್ಮೇಳನ ರದ್ದಾಗಿದ್ದು, ಇದರಿಂದ ಸರ್ಕಾರ ಬಿಡುಗಡೆ ಮಾಡಿದ್ದ ವಿಶೇಷ ಅನುದಾನವೂ ವಾಪಸ್ ಹೋಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಸಮ್ಮೇಳನ ರದ್ದಿಗೆ ಕೆಳಹಂತದ ಅಧಿಕಾರಿಗಳನ್ನು ಮಾತ್ರ ಹೊಣೆಗಾರರನ್ನಾಗಿ ಮಾಡುವುದು ಸರಿಯಲ್ಲ. ಇಲಾಖೆಯ ಮುಖ್ಯಸ್ಥರಾಗಿರುವ ಉಪನಿರ್ದೇಶಕರೇ ಸಂಪೂರ್ಣ ಜವಾಬ್ದಾರಿ ಹೊತ್ತುಕೊಳ್ಳಬೇಕು ಎಂದು ಬಿಎಸ್‌ಪಿ ನಾಯಕರು ಆಗ್ರಹಿಸಿದ್ದಾರೆ.

ಅಂಬೇಡ್ಕರ್ ಅವರ ಹೆಸರಿನಲ್ಲಿ ನಡೆಯಬೇಕಿದ್ದ ಕಾರ್ಯಕ್ರಮ ರದ್ದಾಗಿರುವುದು ದಲಿತ ಸಮುದಾಯ, ಅಂಬೇಡ್ಕರ್ ವಾದಿಗಳು ಹಾಗೂ ಹಿತೈಷಿಗಳ ಭಾವನೆಗಳಿಗೆ ಧಕ್ಕೆ ಉಂಟುಮಾಡಿದ್ದು, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಜಿಲ್ಲೆಯಾದ್ಯಂತ ಆಕ್ರೋಶ ವ್ಯಕ್ತವಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ಆದೇಶ ಹೊರಡಿಸಬೇಕು. ಇಲ್ಲದಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಉಪವಾಸ ಸತ್ಯಾಗ್ರಹ ಮತ್ತು ಧರಣಿ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷರಾದ ಕಪಿಲ ಗೋಡಬೋಲೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಕ್ತಿಕಾಂತ ಭಾವಿದೊಡ್ಡಿ, ಜ್ಞಾನೇಶ್ವರ ಸಿಂಗಾರೆ, ಅಶೋಕ ಮಂಠಾಳ್ಕರ್, ರಾಜಕುಮಾರ ಮೂಲಭಾರತಿ, ಸುರೇಶ ಜೋಜನಾಕರ್, ಅಂಬಾದಾಸ ಚಕ್ರವರ್ತಿ, ಮಹೇಶ ಭೋಲಾ, ಜಾಫರ್ ಖುರೇಷಿ, ಮಲ್ಲಿಕಾರ್ಜುನ ಕೆ, ಭಾರತ ಭಾಗೇಕರ್, ಸಚೀನ ಗಿರಿ, ಶಂಕರ ಫುಲೆ, ನಿಲೇಶ ಮೇಲಕೇರಿ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

# ಬೀದರ್‌ನಲ್ಲಿ ಚನ್ನಮ್ಮ ಉತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಯಶಸ್ವಿ



**ಬೀದರ, ಜೂ.3 :** ಭಾರತ ದೇಶವು ಹಳ್ಳಿಗಳಿಂದ ಕೂಡಿದ ದೇಶವಾಗಿದೆ. ಇಂತಹ ಹಳ್ಳಿ ಕಲಾವಿದರ ಕಲೆ ಮತ್ತು ಸಾಹಿತ್ಯದಲ್ಲಿ ನಾಡಿನ ಪ್ರಜ್ಞೆ ಹಾಗೂ ಸಂಸ್ಕೃತಿಯ ಪರಂಪರೆ ಹಾಸುಹೊಕ್ಕಾಗಿದೆ. ಹೀಗಾಗಿ ದೇಶಿ ಸೊಗಡಿನ ಕಲೆಯನ್ನು ಉಳಿಸಿ ಬೆಳೆಸಿದ ನಿಜವಾದ ಕಲಾವಿದರೆಂದರೆ ಅದು ಜನಪದ ಕಲಾವಿದರು" ಎಂದು ಕನ್ನಡ ಜಾನಪದ ಪರಿಷತ್ ಅಕಾಡೆಮಿಯ ಮಹಿಳಾ ಸದಸ್ಯೆ ಮಂಗಲಾ ತಿಳಿಸಿದರು.

ಅವರು ಇತ್ತೀಚಿಗೆ ನಗರದ ಪ್ರತಾಪನಗರದ ಹನುಮಾನ್ ಮಂದಿರದ ಕಲ್ಯಾಣ ಮಂಟಪದಲ್ಲಿ ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘ ಬೀದರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಚನ್ನಮ್ಮನ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಜನಪದ ಹಾಡಿನಲ್ಲಿ, ನರ್ತನದಲ್ಲಿ ಹಾಗೂ ನಾಟಕ ಪ್ರದರ್ಶನದಲ್ಲಿ ಇಂದಿನ ಕಲಾವಿದರು ಎಷ್ಟೇ ಪ್ರಜ್ಞಾವಂತರಾಗಿದ್ದರೂ ಕೂಡ, ಅಪ್ಪಟ ಜನಪದರ ಮುಂದೆ ಅವರ ಕಲೆ ಗೌಣವಾಗುತ್ತದೆ. ಇಂತಹ ಕಲಾ ಪರಂಪರೆಯನ್ನು ಮತ್ತು ನಿಜವಾದ ಜನಪದ ಕಲಾವಿದರನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘವು ಮಾಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದು ಅವರು ಶ್ಲಾಘಿಸಿದರು.

ಇದೇ ವೇಳೆ ಕಿತ್ತೂರು ರಾಣಿ ಚನ್ನಮ್ಮನವರ ವೀರತ್ವ ಹಾಗೂ ಆದರ್ಶಗಳನ್ನು ಸ್ಮರಿಸಿದ ಅವರು, ವೀರ ಮಹಿಳೆಯರ ಆದರ್ಶಗಳು ಇಂದಿನ ಎಲ್ಲಾ ಮಹಿಳೆಯರಲ್ಲೂ ಮೂಡಿಬರಬೇಕು. ಇಲಾಖೆಯ ಸಹಯೋಗದೊಂದಿಗೆ ಇಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಂಡಿರುವುದು ಅಭಿನಂದನೀಯ. ಬೀದರ್‌ನ ಕಲಾವಿದರು ತಮ್ಮ ಅತ್ಯುತ್ತಮ ಕಲಾ ಪ್ರದರ್ಶನದ ಮೂಲಕ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಬೆಳೆಯುವಂತಾಗಲಿ" ಎಂದು ಶುಭ ಹಾರೈಸಿದರು.

ಉತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿವಿಧ ಕಲಾತಂಡಗಳಿಂದ ಮೂಡಿಬಂದ ಪ್ರದರ್ಶನಗಳು ಪ್ರೇಕ್ಷಕರ ಮನ ಗೆದ್ದವು.

ಈ ಕಾರ್ಯಕ್ರಮದಲ್ಲಿ ರೇವಣಪ್ಪ ಮುಲಗೆ, ರಾಜಕುಮಾರ್ ಹುಮನಾಬಾದೆ, ಪ್ರಕಾಶ್ ಕುಲಕರ್ಣಿ, ಲಕ್ಷ್ಮಿ ಚಿಟ್ಟಾ, ಶಿವಕುಮಾರ್, ಮಾಣಿಕ, ರಾಜಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಮಾಹಾದೇವಿ ಅವರು ಎಲ್ಲರನ್ನೂ ಸ್ವಾಗತಿಸಿದರು, ಕೃಷ್ಣಾ ಅವರು ಕಾರ್ಯಕ್ರಮ ಸಂಚಾಲನೆ ನಡೆಸಿಕೊಟ್ಟರೆ, ಬಸವರಾಜ ಅವರು ವಂದನಾರ್ಪಣೆ ಮಾಡಿದರು.

# ಆರ್‌ಸೇಟಿನಿಂದ ಸಹಾಯಕ ಬುಕ್ಕೀಪರ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜೂನ್ 03 :** ರಾಯಚೂರಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಹಾಗೂ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಯುವಕರಿಗಾಗಿ ಸಹಾಯಕ ಬುಕ್ಕೀಪರ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 2026ರ ಜೂನ್ 12ರಿಂದ ಪ್ರಾರಂಭವಾಗಿ 38ದಿನಗಳ ಕಾಲ ನಡೆಯಲಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ.

ಆಸಕ್ತರು 12ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 50 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಎವೈವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್, ಜಾತಿ ಹಾಗೂ ಆದಾಯ ಪ್ರಮಾಣ ಪತ್ರದ ಪತ್ರಿಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 9742470999, 8217382735ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಮರಾಜನಗರದಲ್ಲಿ ವಾರಕ್ಕೊಮ್ಮೆ ಹೃದಯ ತಪಾಸಣೆ ಮಾಡಲು ಚಿಂತನೆ: ಡಾ. ಬಿ. ದಿನೇಶ್

**ಮೈಸೂರು, ಜೂ.03:** ಜಯದೇವ ಹೃದ್ರೋಗ ಸಂಸ್ಥೆಯಿಂದ ಚಾಮರಾಜನಗರ ವೈದ್ಯಕೀಯ ಕಾಲೇಜು ಹಾಗೂ ಜಿಲ್ಲಾಡಳಿತದ ಸಹಕಾರದೊಂದಿಗೆ ಚಾಮರಾಜನಗರದಲ್ಲಿ ವಾರಕ್ಕೊಮ್ಮೆ ಸಾರ್ವಜನಿಕರಿಗೆ ಹೃದಯ ತಪಾಸಣೆ ನಡೆಸಲು ಚಿಂತನೆ ನಡೆಸಲಾಗಿದೆ ಎಂದು ಜಯದೇವ ಹೃದ್ರೋಗ ಮತ್ತು ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ. ಬಿ. ದಿನೇಶ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಗಡಿನಾಡು ಚಾಮರಾಜನಗರದಲ್ಲಿ ಸಣ್ಣ ಹೃದ್ರೋಗ ಘಟಕವನ್ನು ಪ್ರಾರಂಭ ಮಾಡಿ ಪ್ರತಿ ಸೋಮವಾರ ಅಥವಾ ಬುಧವಾರ ಹೃದಯ ಸಮಸ್ಯೆ ಇರುವವರಿಗೆ ತಪಾಸಣೆ ನಡೆಸಿ ಹೆಚ್ಚಿನ ಚಿಕಿತ್ಸೆಗೆ ಮೈಸೂರಿಗೆ ಕರೆತಂದು ಚಿಕಿತ್ಸೆ ನೀಡಲಾಗುವುದು ಎಂದ ಅವರು ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಹೃದಯಾಘಾತದ ಬಗ್ಗೆ ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸಬೇಕು. ಉತ್ತರ ಭಾರತದಲ್ಲಿ ಬಿಸಿಲಿನ ದಗೆಗೆ ಶರೀರದಲ್ಲಿ ನೀರಿನ ಕೊರತೆ ಉಂಟಾಗಿ ಬೇರೆ ಬೇರೆ ಖಾಯಿಲೆಗಳಿಗೆ ಜನರು ತುತ್ತಾಗುತ್ತಿದ್ದಾರೆ. ಆದ್ದರಿಂದ ಹೃದಯ ರೋಗಿಗಳು ಪ್ರತಿ 3 ತಿಂಗಳಿಗೊಮ್ಮೆ ಹೃದಯ ತಪಾಸಣೆ ಮಾಡಿಸಿಕೊಳ್ಳಬೇಕು. ಯುವಕರಲ್ಲಿ ಹೆಚ್ಚಾಗಿ ಹೃದಯಾಘಾತ ವಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಯುವಕರು ಮದ್ಯಪಾನ, ಧೂಮಪಾನ, ಮಾದಕವಸ್ತುಗಳ ಸೇವನೆಯನ್ನು ತ್ಯಜಿಸಿ ಉತ್ತಮವಾದ ಆರೋಗ್ಯಶೈಲಿಯನ್ನು ಅಳವಡಿಸಿಕೊಳ್ಳಬೇಕು. ವ್ಯಾಯಾಮ, ವಾಕಿಂಗ್ ಮಾಡಬೇಕು. ಮನೆ ಆಹಾರ, ಸೊಪ್ಪು, ಕಾಳು, ತರಕಾರಿಗಳನ್ನು ಹೆಚ್ಚಾಗಿ ಉಪಯೋಗಿಸಬೇಕು. ಬೇಕರಿ ತಿಂಡಿಗಳನ್ನು ತಿನ್ನಬಾರದು. 40 ವರ್ಷ ಮೇಲ್ಪಟ್ಟವರು ವರ್ಷಕ್ಕೊಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು.

ಆಗ ಮಾತ್ರ ಉತ್ತಮವಾದ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದ ಅವರು ಬೆಂಗಳೂರಿನ ಗೋವಿಂದರಾಜನಗರ, ಚರಕ ಆಸ್ಪತ್ರೆಗಳಲ್ಲಿಯೂ 3



ತಿಂಗಳಲ್ಲಿ ಜಯದೇವ ಹೃದ್ರೋಗ ಘಟಕ ಪ್ರಾರಂಭಿಸಲಾಗುತ್ತಿದೆ. ಮೈಸೂರಿನಲ್ಲಿ 200 ಹಾಸಿಗೆ ಹೆಚ್ಚುವರಿ ಕಟ್ಟಡಕ್ಕೆ 1 ತಿಂಗಳಲ್ಲಿ ಶಂಕುಸ್ಥಾಪನೆ ಮಾಡುತ್ತೇವೆ. ಸೆಪ್ಟಂಬರ್‌ನಲ್ಲಿ ಹುಬ್ಬಳ್ಳಿಯಲ್ಲಿ 437 ಹಾಸಿಗೆ ಸಾಮರ್ಥ್ಯದ ಹೃದ್ರೋಗ ಆಸ್ಪತ್ರೆ ಸಾರ್ವಜನಿಕರ ಸೇವೆಗೆ ಸಿದ್ಧವಾಗುತ್ತಿದೆ ಎಂದರು.

# ದೇಹ ಮತ್ತು ಮನಸ್ಸು ಬಲಿಷ್ಟವಾಗಿರಬೇಕು-ಪಿಎಸ್‌ಐ ಜ್ಯೋತಿ



**ತಾಳಿಕೋಟೆ:** ಮಾನವರಾದ ನಮ್ಮ ಜೀವನದಲ್ಲಿ ಎಲ್ಲದರಲ್ಲಿಯೂ ಯಶಸ್ವಿ ಕಾಣಬೇಕಾದರೆ ಮೊದಲು ದೇಹ ಬಲಿಷ್ಠವಾಗಿರಬೇಕು ಅಂದರೆ ಮನಸ್ಸು ಕೂಡಾ ಬಲಿಷ್ಠವಾಗಿರುತ್ತದೆ ಎಂದು ಸ್ಥಳೀಯ ಪೋಲೀಸ್‌ಠಾಣೆಯ ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್ ಅವರು ನುಡಿದರು.

ಮಂಗಳವಾರರಂದು ಸ್ಥಳೀಯ ಶ್ರೀ ಖಾಸ್ಗತೇಶ್ವರ ಮಠದ ಪೀಠಾಧಿಪತಿಗಳಾದ ಶ್ರೀ ಸಿದ್ದಲಿಂಗದೇವರ ಜನ್ಮೋತ್ಸವ ಅಂಗವಾಗಿ ಸ್ಥಳೀಯ ಕ್ರೀಡಾ ಯುವ ಘಟಕ ಸಂಘಟನೆಯ ವತಿಯಿಂದ ಎಸ್‌ಕೆ ಹೈಸ್ಕೂಲ್ ಮೈದಾನದಲ್ಲಿ ಏರ್ಪಡಿಸಲಾದ ಸಿದ್ದಲಿಂಗದೇವರ ಪ್ರಿಮಿಯರ್ ಲೀಗ್ ಸಿಸನ್ 1(ಎಸ್‌ಪಿಎಲ್1) ಕ್ರಿಕೇಟ್ ಪಂದ್ಯಾವಳಿಯನ್ನು ರಿಬ್ಬನ್ ಕಟ್ ಮಾಡುವ ಮೂಲಕ ಉದ್ಘಾಟಿಸಿ ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದ ಅವರು ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠವು ರಾಜ್ಯದ ಪ್ರಮುಖ ಮಠಗಳಲ್ಲಿ ಒಂದಾಗಿದ್ದು ಶ್ರೀ ಮಠದ ಶ್ರೇಯಸ್ಸು ಘನತೆಯನ್ನು ಹೆಚ್ಚಿಸುತ್ತಾ ಸಾಗಿದ ಮಠದ ಪೀಠಾದಿಪತಿ ಸಿದ್ದಲಿಂಗದೇವರ ಜನ್ಮದಿನೋತ್ಸವ ಅಂಗವಾಗಿ ಇಂದು ಏರ್ಪಡಿಸಲಾದ ಕ್ರೀಕೆಟ್ ಕ್ರೀಡಾಕೂಟವು ಜನಮನ ರಂಜಿಸುವಂತಾಗಲಿ ಯುವ ಜನತೆ ಈ ಕ್ರೀಡೆಯನ್ನು ಹಮ್ಮಿಕೊಂಡಿದ್ದು ಸಂತಸದಾಯಕ ಸಂಗತಿಯಾಗಿದೆ ಸತ್ಯ ಧರ್ಮ ಪ್ರೇಮ ಶಾಂತಿಯ ವಿಚಾರದೊಂದಿಗೆ ಕ್ರೀಡಾಕೂಟವನ್ನು ನೆರವೇರಿಸಿಕೊಂಡು ಮಾದರೀಯ ಕ್ರೀಡಾಪಟುಗಳಾಗಿ ರಾಜ್ಯದ ಉದ್ದಗಲಕ್ಕೂ ಅಷ್ಟೇ ಅಲ್ಲ ದೇಶದ ಉದ್ದಗಲಕ್ಕೂ ಸಹ ಹೆಸರುವಾಸಿಯಾಗಲಿ ಎಂದು ಶುಭಹಾರೈಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಭಾರತೀಯ ಜನತಾಪಕ್ಷದ ಮಾಜಿ ಜಿಲ್ಲಾಧ್ಯಕ್ಷರಾದ ಆರ್.ಎಸ್. ಪಾಟೀಲ(ಕೂಚಬಾಳ) ಅವರು ಮಾತನಾಡಿ ಭಾರತ ದೇಶವು ಜ್ಞಾನ ವಿಜ್ಞಾನವನ್ನು ಎಲ್ಲವನ್ನು ಕೊಟ್ಟಿದೆ ಅಂತಹದರಲ್ಲಿ ತಾಳಿಕೊಟೆಯ ನಗರದಲ್ಲಿಯ ಖಾಸ್ಗತ ಮಠದ ಸಿದ್ದಲಿಂಗದೇವರ ನಡೆನುಡಿ ಅವರ ಆಶೀರ್ವಚನವನ್ನು ಕೇಳಿದ ಎಲ್ಲ ಭಕ್ತಸಮೂಹ ಮೆಚ್ಚುಗೆ ಪಡುತ್ತಾ ಸಾಗಿದ್ದಾರೆ ಅವರು ವಿಜಯಪುರ ಜಿಲ್ಲೆಯ ಎರಡನೇ ಸಿದ್ದೇಶ್ವರ ಶ್ರೀಗಳೆಂದು ಬಣ್ಣಿಸಿದರೆ ಸಾಲದು ಅವರೂ ಕೂಡಾ ಕೊಪ್ಪಳ ಶ್ರೀಗಳಂತೆ ತಮ್ಮಲ್ಲಿಯ ವಿದ್ಯಾಬುದ್ದಿಯನ್ನು ಭಕ್ತಸಮೂಹಕ್ಕೆ ನೀಡುತ್ತಾ ಸಾಗಿದ್ದಾರೆ ಅಂತಹ ಶ್ರೀಗಳ ಜನ್ಮೋತ್ಸವ ಕುರಿತು ಯುವಕರ ತಂಡ ಕ್ರಿಕೇಟ್ ಕ್ರೀಡಾಕೂಟವನ್ನು ಏರ್ಪಡಿಸಿ ಶ್ರೀಗಳ ಹೆಸರನ್ನು ಇನ್ನೂ ಉತ್ತುಂಗಕ್ಕೇರಿಸುವ ಕಾರ್ಯ ಮಾಡಿರುವದು ಸಂತಸದಾಯಕ ಸಂಗತಿಯಾಗಿದೆ ಈ ಕಾರ್ಯ ಪ್ರತೀ ವರ್ಷ ಸತತವಾಗಿ ನಡೆಯಲಿ ಎಂದು ಶುಭಕೋರಿದರು.

ಇನ್ನೋರ್ವ ನಿವೃತ್ತ ಶಿಕ್ಷಕರಾದ ಬಸವರಾಜ ಕೊಡಗಾನೂರ ಅವರು ಮಾತನಾಡಿ ತಾಳಿಕೋಟೆ ಪಟ್ಟಣದಲ್ಲಿ ಎಸ್.ಕೆ ಹೈಸ್ಕೂಲ್‌ನಲ್ಲಿ ನಾನು ಶಿಕ್ಷಣ ಪಡೆಯುತ್ತಿದ್ದಾಗ ಅಂದು ವಾಲಿಬಾಲ್ ಟೀಮ್ ಒಂದು ಜಿಲ್ಲೆ ಹಾಗೂ ರಾಜ್ಯದವರೆಗೂ ಕೂಡಾ ಮಿಂಚಿನ ವೇಗದಲ್ಲಿ ಸಾಗಿಸಿತ್ತು ಆ ತಂಡ ತಾಳಿಕೋಟೆ ಹೆಸರು ಗಳಿಸಿದೆ. ಇಂದಿಗೂ ಕೂಡಾ ಅಂತಹ ಹೆಸರು ಗಳಿಸಲು ಸಿದ್ದವಾಗಿರುವ ಶ್ರೀ ಸಿದ್ದಲಿಂಗದೇವರ ಜನ್ಮೋತ್ಸವವನ್ನು ಆಚರಿಸಲು ಕ್ರಿಕೇಟ್ ಯುವಕರ ತಂಡ ಸಜ್ಜಾಗಿರುವದು ಸಂತಸ ತಂದಿದೆ. ಈ ತಂಡದಲ್ಲಿ ಪ್ರಥಮ, ದ್ವಿತೀಯ, ನಾಲ್ಕನೇ ಸ್ಥಾನ ಪಡೆದವರಿಗೂ ಸಹ ನಗದು ಬಹುಮಾನವನ್ನು ಏರ್ಪಡಿಸಿರುವದೂ ಸಹ ಸಂತಸದಾಯ ಸಂಗತಿಯಾಗಿದೆ ಎಂದು ಹೇಳಿದ ಅವರು ಶ್ರೀ ಸಿದ್ದಲಿಂಗದೇವರ ಕೃಪಾಶೀರ್ವಾದದೊಂದಿಗೆ ತಾಳಿಕೋಟೆಯ ಯುವಕರ ಕ್ರಿಕೇಟ್ ಸಂಘಟನೆಯ ತಂಡ ಉತ್ತರೋತ್ತರವಾಗಿ ಬೆಳೆದು ತಾಳಿಕೋಟೆಯ ಹೆಸರು ಎಲ್ಲೆಡೆಯಲ್ಲಿಯೂ ಬೆಳಗಲಿ ಎಂದು ಆಶಿಸಿದರು.

ಶ್ರೀ ಖಾಸ್ಗತೇಶ್ವರ ಮಠದ ಉಸ್ತುವರಿ ಮುರುಘೇಶ ವಿರಕ್ತಮಠ ಸಾನಿದ್ಯ ವಹಿಸಿದ್ದರು.

ಗಣ್ಯರಾದ ಶರಣಗೌಡ ಹೆಗರಡ್ಡಿ, ಬಸವರಾಜ ಕುಂಬಾರ, ಜಯಸಿಂಗ್ ಮೂಲಿಮನಿ, ಎನ್.ಎಸ್. ಸರಶೆಟ್ಟಿ, ಪ್ರಭುಗೌಡ ಮದರಕಲ್ಲ, ಕಾಶೀನಾಥ ಮುರಾಳ, ಎಂ.ಆರ್. ಕತ್ತಿ, ಜಯಭೀಮ ಮುತ್ತಗಿ, ಮಹಾಂತೇಶ ವಾಲಿ, ವಿರೇಶ ಸಾಸನೂರ, ರಾಜೇಶ ಹಜೇರಿ, ಸನರಾಜ್ ಪಾಟೀಲ, ಕಿರಣ್ ಕತ್ತಿ ಮೊದಲಾದವರು ಉಪಸ್ತಿತರಿದ್ದರು.

ದಿ. 2 ರಂದು ಉದ್ಘಾಟನೆಗೊಂಡ ಕ್ರಿಕೇಟ್ ಕ್ರೀಡಾಕೂಟದಲ್ಲಿ ತಾಳಿಕೋಟೆ ಪಟ್ಟಣ ಒಳಗೊಂಡು ಗ್ರಾಮೀಣ ವಲಯ ಒಳಗೊಂಡು 8 ಟೀಮ್‌ಗಳು ಭಾಗವಹಿಸಿದ್ದು ಬರಲಿರುವ ದಿ. 7 ರವಿವಾರರಂದು ಶ್ರೀ ಸಿದ್ದಲಿಂಗದೇವರ ಜನ್ಮದಿನದಂದು ಕ್ರೀಡಾಕೂಟವಿಜೇತ ತಂಡದವರಿಗೆ ಬಹುಮಾನ ವಿತರಿಸುವ ಕಾರ್ಯದೊಂದಿಗೆ ಮಂಗಲಗೊಳ್ಳಲಿದೆ.

# ಪ್ರಮಾಣ ವಚನ ಸ್ವೀಕರಿಸುವ ಮುನ್ನರೈತರ ಸಾಲ ಮನ್ನಾ ಮಾಡಲಿ: ಮಲ್ಲಿಕಾರ್ಜುನ ಸ್ವಾಮಿ

**ಬೀದರ,ಜೂ 3 :** ಇಂದು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಮುನ್ನ ಡಿಕೆ ಶಿವಕುಮಾರ ಅವರು ರೈತರ ಸಾಲ ಮನ್ನಾ ಮಾಡಿ ರೈತರಿಗೆ ಶುಭಸುದ್ದಿ ನೀಡಲಿ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು

ಕಬ್ಬು ಬೆಳೆಗಾರ ರೈತರಿಗೆ ಕಾರ್ಖಾನೆಯಿಂದ ಹಣ ಪಾವತಿ ಮಾಡದೇ ಇರುವುದರಿಂದ ಕೂಡಲೇ ಜಿಲ್ಲಾಡಳಿತ ಹಣ ಪಾವತಿ ಮಾಡಿಸಬೇಕು. ಜಿಲ್ಲೆಯಲ್ಲಿ ಮುಂಗಾರು-ಹಂಗಾಮು ಪ್ರಾರಂಭವಾಗಿದ್ದು, ರಸಗೊಬ್ಬರದ ಕೊರತೆ ಎದ್ದು ಕಾಣಿಸುತ್ತಿದೆ. ಇದರಿಂದ ರೈತರು ಆತಂಕಕ್ಕೆ ಒಳಗಾಗಿದ್ದಾರೆ. ಪಿ.ಕೆ.ಪಿ.ಎಸ್. ಗಳಲ್ಲಿ ಹಾಗೂ ಮಾರುಕಟ್ಟೆಯಲ್ಲಿ ಗೊಬ್ಬರ ಸಿಗುವ ಹಾಗೆ ಕ್ರಮಕೈಗೊಳ್ಳಬೇಕು. ದೇಶಕ್ಕೆ ಅನ್ನ ಬೆಳೆಯುವ ಅನ್ನದಾತರಿಗೆ ಎಫ್.ಐ.ಡಿ. ಹಾಗೂ ಇತರೆ ತಾಂತ್ರಿಕ ತೊಂದರೆ ಕೊಡದೇ ನೇರವಾಗಿ ವಿತರಣೆ ಮಾಡಲು ಅನುವು ಮಾಡಿಕೊಡಬೇಕು. ಏಕೆಂದರೆ, ಇದು ದೇಶದ ಆಹಾರ ಭದ್ರತೆ ವಿಷಯವಾಗಿರುವುದರಿಂದ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಜಿಲ್ಲೆಯ ರೈತರಿಗೆ ಕೃಷಿ ಚಟುವಟಿಕೆ ಕೈಗೊಳ್ಳಲು ಬ್ಯಾಂಕಿನ ಸಾಲದ ನೀತಿಯಲ್ಲಿ ಸಿವಿಲ್ ಸ್ಕೋರ್ ನೆಪದಲ್ಲಿ ರೈತರಿಗೆ ಸಾಲ ಸಿಗದೇ ಒದ್ದಾಡುತ್ತಿದ್ದಾರೆ. ಸರಳ ರೀತಿಯಲ್ಲಿ ಕೃಷಿ ಆಧಾರಿತ ಸಾಲವಾಗಿರುವುದರಿಂದ ರೈತರಿಗೆ ಸಿವಿಲ್ ಸ್ಕೋರ್ ವ್ಯವಸ್ಥೆಯಿಂದ ಹೊರಗಿಟ್ಟು ಸರಳ ಸಾಲ ವಿತರಣೆ ಮಾಡಬೇಕು. ಜಿಲ್ಲೆಯ ಜೀವನಾಡಿಯಾಗಿರುವ ಬಿ.ಎಸ್.ಎಸ್.ಕೆ. ಸಕ್ಕರೆ ಕಾರ್ಖಾನೆಯನ್ನು ಸರ್ಕಾರವು ರೈತರ ಹಾಗೂ ಕಾರ್ಮಿಕರ ಹಿತದೃಷ್ಟಿಯಿಂದ ಯಾವುದಾದರೂ ವ್ಯವಸ್ಥೆ ಮಾಡಿ ಬರುವ ಹಂಗಾಮಿಗೆ ಕಾರ್ಖಾನೆಗೆ ಪುನರ್ ಪ್ರಾರಂಭ ಮಾಡಲು ಕ್ರಮಕೈಗೊಳ್ಳಬೇಕು. ಇದಕ್ಕೆ ಜಿಲ್ಲೆಯ ಎಲ್ಲಾ ಶಾಸಕರು ಮತ್ತು



ಸಂಸದರು ವಿಶೇಷ ಕಾಳಜಿ ವಹಿಸಿ ಜಿಲ್ಲೆಯ ರೈತರ ಹಿತದೃಷ್ಠಿಯಿಂದ ಪಕ್ಷಭೇದ ಮರೆತು ಒಂದಾಗಿ ಕೈಜೋಡಿಸಿ ಪ್ರಾರಂಭಿಸಬೇಕು.

ಜೂ. 3 ರಂದು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುತ್ತಿರುವ ಸನ್ಮಾನ್ಯ ಶ್ರೀ ಡಿ.ಕೆ. ಶಿವಕುಮಾರ ಅವರಿಗೆ ಬೀದರ ಜಿಲ್ಲೆಯ ರೈತರ ಪರವಾಗಿ ಅಭಿನಂದನೆ ಸಲ್ಲಿಸುತ್ತೇವೆ. ಮತ್ತು ಪ್ರಮಾನ ವಚನ ಸ್ವೀಕರಿಸಿದ ಮೊದಲನೇ ಆದ್ಯತೆ ರೈತರ ಸಂಪೂರ್ಣ ಸಾಲಮನ್ನಾ ಮಾಡಿ ಧೀಮಂತ ರೈತ ನಾಯಕನಾಗಿ ರೂಪಗೊಳ್ಳಬೇಕು ಎಂದು ಮಲ್ಲಿಕಾರ್ಜುನ ಸ್ವಾಮಿ ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಪ್ರಮುಖ ರೈತ ಮುಖಂಡರಾದ ಬಾಬುರಾವ ಹೊನ್ನಾ, ಭಾರತೀಯ ಕಿಸಾನ ಮೋರ್ಚಾ ಬೀದರ ಇವರು ಮಾತನಾಡಿದರು. ಇದೇ ವೇಳೆ ಬಸವರಾಜ ಅಷ್ಟೂರ, ಶಿವರಾಜ ಪಾಟೀಲ ಅತಿವಾಳ, ವೀರಾರೆಡ್ಡಿ ಪಾಟೀಲ್, ಕೋಂಡಿಬಾರಾವ ಪಾಂಡ್ರೆ, ವಿಠಲರೆಡ್ಡಿ ಅಣದೂರು, ಧೂಳಪ್ಪಾ ಸೊರಳೆ, ಶಿವರಾಯ ಮುಧಾಳೆ, ಮಲ್ಲಿಕಾರ್ಜುನ ಬಿರಾದಾರ ಸಂಗಮ, ಬಾಬುರಾವ ಭೋಸ್ಥೆ ಭಾಲ್ಕಿ, ವಿಶ್ವನಾಥ ಧರಣೆ, ವಿಜಯಕುಮಾರ ಬಾವಗಿ, ನಜೀರ ಅಹ್ಮದ, ರಾಜಕುಮಾರ ಸ್ವಾಮಿ ಬೀದರ, ಶಫೀಯೋದ್ದೀನ್ ಸೇರಿದಂತೆ ಹಲವರಿದ್ದರು.

## ಅಪಘಾತ ತಡೆಗಟ್ಟಲು ರಸ್ತೆಗಳ ಅಭಿವೃದ್ಧಿಗೆ ಕ್ರಮವಹಿಸಿ



**ಮೈಸೂರು, ಜೂ.03:–** ರಸ್ತೆ ಸುರಕ್ಷತಾ ಸಮಿತಿ ವತಿಯಿಂದ ಅಪಘಾತಗಳು ಹೆಚ್ಚಾಗಿ ಸಂಭವಿಸುವ 120 ಬ್ಲ್ಯಾಕ್ ಸ್ಪಾಟ್ ಗಳನ್ನು ಪಟ್ಟಿ ಮಾಡಲಾಗಿದೆ. ಸದರಿ ರಸ್ತೆಗಳಲ್ಲಿ ಅಪಘಾತ ತಡೆಗಟ್ಟುವ ರೀತಿಯಲ್ಲಿ ಯೋಜನೆ ರೂಪಿಸಲಾಗಿರುತ್ತದೆ. ಸದರಿ ರಸ್ತೆಗಳ ಅಭಿವೃದ್ಧಿಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಜಿ ಅವರು ತಿಳಿಸಿದರು. ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ ಮಾತನಾಡಿದರು. ರಸ್ತೆ ಅಪಘಾತಗಳಲ್ಲಿ ಸಾವು ಸಂಭವಿಸುವ ರಸ್ತೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ನಿಖರ ಕಾರಣಗಳನ್ನು ಪಟ್ಟಿ ಮಾಡಿಕೊಂಡು ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದರು.

120 ಬ್ಲ್ಯಾಕ್ ಸ್ಪಾಟ್ ರಸ್ತೆಗಳ ಪ್ರಗತಿಯ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಹೆಚ್ಚಿನ ರಸ್ತೆಗಳು ಲೋಕೋಪಯೋಗಿ ಹಾಗೂ ರಾಷ್ಟ್ರೀಯ ಹೆದ್ದಾರಿ ಇಲಾಖೆಗೆ ಸೇರಿದ್ದು, ರಸ್ತೆ ಅಭಿವೃದ್ಧಿಗಾಗಿ ಸರ್ಕಾರಕ್ಕೆ ಅನುದಾನ ಕೋರಿ ಮನವಿ ಸಲ್ಲಿಸಿ ಹಾಗೂ ತಮ್ಮ ಇಲಾಖೆಯಲ್ಲಿ ಲಭ್ಯ ಅನುದಾನದ ನಿಯಮಾನುಸಾರ ಸಧ್ಯವಾದಲ್ಲಿ ಸದರಿ ಕಾಮಗಾರಿಗಳನ್ನು ಸೇರಿಸಿಕೊಳ್ಳಿ ಎಂದರು.ಮೈಸೂರು ನಗರ ಪ್ರಾದೇಶದಲ್ಲೂ ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆಯವರು ಜಂಟಿಯಾಗಿ ಪರಿಶೀಲನೆ ನಡೆಸಿ ಬ್ಲ್ಯಾಕ್ ಸ್ಪಾಟ್ ಗಳನ್ನು ಗುರುತಿಸಿ ರಸ್ತೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.ಕೆಲವು ರಸ್ತೆಗಳಲ್ಲಿ ಸೂಚನಾ ಫಲಕ ಅಳವಡಿಕೆ ಸೇರಿದಂತೆ ಸಣ್ಣ ಕಾಮಗಾರಿಗಳನ್ನು ಕೈಗೊಳ್ಳುವುದರಿಂದ ರಸ್ತೆ ಅಪಘಾತಗಳನ್ನು ತಡೆಯಬಹುದಾಗಿದ್ದು, ಇದರ ಬಗ್ಗೆ ಹೆಚ್ಚಿನ ನಿಗಾ ವಹಿಸಿ. ರಸ್ತೆ ಅಪಘಾತದಲ್ಲಿ ಮರಣ ಹೊಂದಿದ ಪ್ರಕರಣ ಇದ್ದಲ್ಲಿ ತಪ್ಪದೇ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ. ರಿಂಗ್ ರೋಡ್ ಗಳಲ್ಲಿ ವಾಹನಗಳ ಸಂಚಾರಕ್ಕಾಗಿ ಅನಧಿಕೃತವಾಗಿ ಸಣ್ಣ ತೆರವು ಮಾಡಿಕೊಂಡಿದ್ದಲ್ಲಿ ಅವುಗಳನ್ನು ಸರಿಪಡಿಸಿ ಎಂದರು.ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ,ಸಹಾಯಕ ಪೊಲೀಸ್ ಆಯುಕ್ತರು (ಸಂಚಾರ) ಶಿವ ಶಂಕರ್ ಎಂ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ಪದ್ಮನಾಭ, ಮೈಸೂರು ಮಹಾನಗರ ಪಾಲಿಕೆ ಅಧೀಕ್ಷಕ ಎಂಜಿನಿಯರ್ ಮಂಜು ಸಿ. ಎಸ್, ಸೈಟ್ ಇಂಜಿನಿಯರ್(NHAI) ಅರುಣ್ ಬಿ, ಸಿದ್ಧಾರ್ಥನಗರ ಸಂಚಾರಿ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಶಿವಪ್ರಸಾದ್ ರಾವ್, ವಿ.ವಿ. ಪುರಂ ಸಂಚಾರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಮಮತಾ ವಿ.ಡಿ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಕುಖ್ಯಾತ ಮನೆಗಳ್ಳನ ಬಂಧನ: 10.30 ಲಕ್ಷ ರೂ ಮೌಲ್ಯದ ಸ್ವತ್ತು ವಶ



**ಕಲಬುರಗಿ,ಜೂ 3:** ಅಶೋಕ ನಗರ ಪೊಲೀಸರು ಕಾರ್ಯಾಚರಣೆ ನಡೆಸಿ 7 ಮನೆ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದ ಕುಖ್ಯಾತ ಮನೆಗಳ್ಳನನ್ನು ಬಂಧಿಸಿ,ಬಂಧಿತನಿಂದ 10.30 ಲಕ್ಷ ರೂ ಮೌಲ್ಯದ ಸ್ವತ್ತು ವಶಪಡಿಸಿಕೊಂಡಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಅವರು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ನಗರದ ಸಂತೋಷ ಕಾಲೋನಿ ನಿವಾಸಿ ಚಿತ್ತಾಪುರ ತಾಲೂಕಿನ ಯರಗಲ್ ಗ್ರಾಮದ ಚಾಲಕ ವೃತಿಯ ಮಲ್ಲಿಕಾರ್ಜುನ ದೇವಿಂದ್ರಪ್ಪ ತಳವಾರ ( 33 ವರ್ಷ) ಬಂಧಿತ ಆರೋಪಿ.ಕಳೆದ ಮಾರ್ಚ 1 ರಂದು ಕಾಂತಾ ಕಾಲೋನಿ ನಿವಾಸಿ ತೂಗುದೀಪ್ ಜಗನ್ನಾಥ ಸೂರನ್ ಎಂಬುವವರು ಮನೆಯಲ್ಲಿ 2.65 ಲಕ್ಷ ರೂ ಮೌಲ್ಯದ ನಗನಾಣ್ಯ ಕಳುವಾದ ಬಗ್ಗೆ ಅಶೋಕ ನಗರ ಠಾಣೆಗೆ ದೂರು ನೀಡಿದ್ದರು.

ಪ್ರಕರಣದ ಆರೋಪಿಯ ಪತ್ತೆ ಕುರಿತು ಉಪಪೊಲೀಸ ಆಯುಕ್ತರಾದ ಶಾಲೂ, ಪ್ರವೀಣ ಹೆಚ್, ನಾಯಕ್‌ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಸುಬೇದಾರ, ಅಶೋಕ ನಗರ ಪೊಲೀಸ್ ಠಾಣೆ ಪಿಐ ಸತೀಶ ಕಣಿಮೇಶ್ವರ ನೇತೃತ್ವದಲ್ಲಿ ಸಿಬ್ಬಂದಿಗಳಾದ ವೈಜಿನಾಥ , ಶಿವಪ್ರಕಾಶ, ಮುಜಾಹಿದ್ , ಕರಣ್, ನೀಲಕಂಠರಾಯ, ಚಂದ್ರಶೇಖರ ಹಾಗೂ ಹರಿಕಿಶೋರ ಅವರನ್ನೊಳಗೊಂಡ ತಂಡವನ್ನು ರಚಿಸಲಾಗಿತ್ತು.ಈ ತಂಡವು ಆರೋಪಿತರ ಕುರಿತು ಮಾಹಿತಿ ಕಲೆ ಹಾಕುತ್ತಿರುವಾಗ ಬಿದ್ದಾಪುರ ಕಾಲೋನಿ ಹತ್ತಿರ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಆರೋಪಿತನನ್ನು ವಶಕ್ಕೆ ಪಡೆದುಕೊಂಡು ಕುಲಂಕೂಷವಾಗಿ ವಿಚಾರಣೆಗೊಳಪಡಿಸಿದಾಗ ಆರೋಪಿತನು ಒಟ್ಟು 7 ಪ್ರಕರಣಗಳಲ್ಲಿ ಮನೆ ಕಳ್ಳತನ ಮಾಡಿರುವ ಬಗ್ಗೆ ತನ್ನೊಪ್ಪಿಕೊಂಡಿದ್ದು ಆರೋಪಿತರ ವಿರುದ್ಧ ದಸ್ತಗಿರಿ ಕ್ರಮ ಕೈಗೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪ ಪೊಲಿಸ್ ಆಯುಕ್ತರಾದ ಶಾಲೂ ಹಾಗೂ ಪ್ರವೀಣ್ ಎಚ್. ನಾಯಕ್ ಅವರು ಉಪಸ್ಥಿತರಿದ್ದರು.

# ಆರ್.ಬಿ. ತಿಮ್ಮಾಪುರ್ ಅವರಿಗೆ ಡಿಸಿಎಂ ಸ್ಥಾನ ನೀಡಲು ದಲಿತ ಮುಖಂಡರ ಆಗ್ರಹ



**ಜಮಖಂಡಿ, ಜೂನ್ 3:** ರಾಜ್ಯದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಮಾಜಿ ಸಚಿವ ಆರ್.ಬಿ. ತಿಮ್ಮಾಪುರ್ ಅವರಿಗೆ ಉಪಮುಖ್ಯಮಂತ್ರಿ (ಡಿಸಿಎಂ) ಸ್ಥಾನ ನೀಡಬೇಕು ಎಂದು ಬಾಗಲಕೋಟೆ ಜಿಲ್ಲೆಯ ದಲಿತ ಸಮುದಾಯದ ಮುಖಂಡರು ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ದಲಿತ ಮುಖಂಡರಾದ ಮುತ್ತಣ್ಣ ಮೇತ್ರಿ, ದಾನೇಶ್ ಘಾಟಗೆ, ಭೀಮಸಿ ನಡುವಿನಮನಿ, ಪರಶುರಾಮ ಮಾಂಗ್, ಮಾರುತಿ ಮರೆಗುದ್ದಿ, ಪ್ರಕಾಶ್ ಕಲಹಳ್ಳಿ ಹಾಗೂ ಪುಂಡಲಿಕ್ ಮಾದರ್ ಅವರು, ಆರ್.ಬಿ. ತಿಮ್ಮಾಪುರ್ ಅವರು ಸತತ ಐದು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಸಚಿವರಾಗಿ ಹಾಗೂ ವಿಧಾನ ಪರಿಷತ್ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ. ಸುಮಾರು 15 ವರ್ಷಗಳ ಕಾಲ ರಾಜ್ಯ ಸರ್ಕಾರದಲ್ಲಿ ಮಂತ್ರಿಯಾಗಿ ಸೇವೆ ಸಲ್ಲಿಸಿರುವ ಅವರು ಅಪಾರ ಆಡಳಿತಾತ್ಮಕ ಅನುಭವ ಹೊಂದಿದ್ದಾರೆ ಎಂದು ತಿಳಿಸಿದ್ದಾರೆ.

ಸಾರ್ವಜನಿಕ ಜೀವನದಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿರುವ ತಿಮ್ಮಾಪುರ್ ಅವರು ಹಿಂದುಳಿದ ವರ್ಗಗಳ ಅಭಿವೃದ್ಧಿ, ರೈತರ ಕಲ್ಯಾಣ, ಸಾಮಾಜಿಕ ನ್ಯಾಯ ಹಾಗೂ ಜನಪರ ಆಡಳಿತಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರಿಗೆ ಡಿಸಿಎಂ ಸ್ಥಾನ ನೀಡುವುದರಿಂದ ಕಾಂಗ್ರೆಸ್ ಪಕ್ಷಕ್ಕೂ ಹಾಗೂ ಉತ್ತರ ಕರ್ನಾಟಕದ ದಲಿತ ಸಮುದಾಯಕ್ಕೂ ಹೆಚ್ಚಿನ ಬಲ ಸಿಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಅಲ್ಪಸಂಖ್ಯಾತ ಸಮುದಾಯದ ಮುಖಂಡರಾದ ಅಬೂಬಕರ್ ಕುಡಚಿ ಹಾಗೂ ನದೀಮ್ ಗೋಠೆ ಅವರು, ರಾಜ್ಯದ ಪರಿಶಿಷ್ಟ ಜಾತಿಗಳ ಪೈಕಿ ಹೆಚ್ಚಿನ ಜನಸಂಖ್ಯೆ ಹೊಂದಿರುವ ಮಾದಿಗ ಸಮುದಾಯಕ್ಕೆ ರಾಜಕೀಯವಾಗಿ ಸೂಕ್ತ ಪ್ರಾತಿನಿಧ್ಯ ನೀಡುವ ನಿಟ್ಟಿನಲ್ಲಿ ಆರ್.ಬಿ. ತಿಮ್ಮಾಪುರ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಹಾಗೂ ಪ್ರಬಲ ಖಾತೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ದಲಿತ ಮುಖಂಡ ಭೀಮಸಿ ನಡುವಿನಮನಿ ಅವರು, ಸಚಿವ ಸಂಪುಟದಲ್ಲಿ ಆರ್.ಬಿ. ತಿಮ್ಮಾಪುರ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದರ ಜೊತೆಗೆ ವಿಜಯಪುರ ಜಿಲ್ಲೆಯ ಲಿಂಗಾಯತ ಸಮುದಾಯದ ಪ್ರಮುಖ ನಾಯಕ ಶಿವಾನಂದ ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ಹಿಂದುಳಿದ ವರ್ಗಗಳ ಮುಖಂಡ ನಾಗಪ್ಪ ಹೆಗಡೆ ಅವರು, ಎಡಗೈ ಸಮುದಾಯದ ಶಾಸಕರಿಗೆ ಹೆಚ್ಚಿನ ಸಚಿವ ಸ್ಥಾನಗಳನ್ನು ನೀಡುವ ಮೂಲಕ ಮಾದಿಗ ಸಮುದಾಯಕ್ಕೆ ರಾಜಕೀಯ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಸಂಬಂಧ ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಗಮನಹರಿಸಿ ಸಮುದಾಯದ ಬೇಡಿಕೆಗೆ ಸ್ಪಂದಿಸಬೇಕು ಎಂದು ಪ್ರಕಟಣೆಯಲ್ಲಿ ಮನವಿ ಮಾಡಲಾಗಿದೆ.

ಪ್ರಕಟಣೆದಾರರು: ಮುತ್ತಣ್ಣ ಮೇತ್ರಿ, ದಾನೇಶ್ ಘಾಟಗೆ, ಭೀಮಸಿ ನಡುವಿನಮನಿ, ಮಾರುತಿ ಮರೆಗುದ್ದಿ, ಪರಶುರಾಮ ಮಾಂಗ್, ಪ್ರಕಾಶ್ ಕಲಹಳ್ಳಿ, ಪುಂಡಲಿಕ್ ಮಾದರ್, ಗೋವಿಂದ ಗಸ್ತಿ, ಅಬೂಬಕರ್ ಕುಡಚಿ, ನದೀಮ್ ಗೋಠೆ, ನಾಗಪ್ಪ ಹೆಗಡೆ ಹಾಗೂ ಇತರರು ಇದ್ದರು

# ಜಮಖಂಡಿ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಉದ್ಯೋಗ ನೇಮಕಾತಿ ಶಿಬಿರ



**ಜಮಖಂಡಿ, ಜೂ. 3 :** ವಿದ್ಯಾರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಉದ್ಯೋಗ ನೇಮಕಾತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಮಖಂಡಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ) ಪ್ರಾಚಾರ್ಯ ಎಂ.ಎಸ್. ಲಮಾಣಿ ಹೇಳಿದರು. ನಗರದ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಆಯೋಜಿಸಿದ್ದ ಉದ್ಯೋಗ ನೇಮಕಾತಿ ಶಿಬಿರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣ ಹಾಗೂ ತರಬೇತಿಯನ್ನು ಪೂರ್ಣಗೊಳಿಸಿದ ನಂತರ ಉದ್ಯೋಗಕ್ಕೆ ಸೇರುವ ಮೂಲಕ ತಮ್ಮ ವೃತ್ತಿಜೀವನವನ್ನು ರೂಪಿಸಿಕೊಳ್ಳಬೇಕು. ಆಗ ಮಾತ್ರ ಅವರು ಕಲಿತ ತರಬೇತಿಗೆ ಮೌಲ್ಯ ಸಿಗುವುದರ ಜೊತೆಗೆ ಕಾಲೇಜಿನ ಗೌರವವೂ ಹೆಚ್ಚುತ್ತದೆ ಎಂದು ತಿಳಿಸಿದರು. ಶಿಬಿರದಲ್ಲಿ ವಿವಿಧ ಕಂಪನಿಗಳ ಪ್ರತಿನಿಧಿಗಳಾದ ಪೂರ್ವೇಶ್ ಕೆ., ಪ್ರಕಾಶ ಆಳಗುಂಡಿ, ಮನೋಜ್ ವರ್ಮಾ, ಶೀಜಿ ಜೋಶ್, ಮೋಹನ್ ಕುಮಾರ್, ಕೋಟೇಶ್ವರಾವ್ ಜಿ.ಕೆ. ಹಾಗೂ ಪ್ರದೀಪ್ ಭಾಗವಹಿಸಿ, ತಮ್ಮ ಸಂಸ್ಥೆಗಳಲ್ಲಿ ಲಭ್ಯವಿರುವ ಉದ್ಯೋಗಾವಕಾಶಗಳು, ನೇಮಕಾತಿ ಪ್ರಕ್ರಿಯೆ ಹಾಗೂ ಅಗತ್ಯ ಕೌಶಲ್ಯಗಳ ಕುರಿತು ವಿದ್ಯಾರ್ಥಿಗಳಿಗೆ ವಿವರವಾದ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಸಿ.ಬಿ. ಮಠ ಸ್ವಾಗತಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ತರಬೇತಿ ಅಧಿಕಾರಿ ಎಂ.ಎಸ್. ಸಾವಿಮಠ, ಶಿಕ್ಷಕರಾದ ಡಿ.ಬಿ. ಮಾದರ, ಎಂ.ಬಿ. ಪತ್ತಾರ, ಎಸ್.ಎಂ. ಹುಗಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಜಮಖಂಡಿ, ಯಡಹಳ್ಳಿ, ರಬಕವಿ, ಸಾವಳಗಿ, ಚಿಕ್ಕಪಡಸಲಗಿ ಹಾಗೂ ಅಥಣಿ ಸೇರಿದಂತೆ ವಿವಿಧ ಪ್ರದೇಶಗಳ ಐಟಿಐ ಮತ್ತು ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಶಿಬಿರದಲ್ಲಿ ಭಾಗವಹಿಸಿ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಪಡೆದುಕೊಂಡರು.

# ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉದ್ಯೋಗದಲ್ಲಿ ವಿಶೇಷ ಮೀಸಲಾತಿ

**ಕೋಲಾರ,ಜೂ.3–**ಪೋಷಕರು ತಮ್ಮ ಮಕ್ಕಳಿಗೆ ಧರ್ಮಸ್ಥಳ, ತಿರುಪತಿ, ದರ್ಗಾ ಅಥವಾ ಚರ್ಚ್‌ಗಳಿಗಿಂತಲೂ ತಾವು ಓದುವ ಶಾಲೆಯೇ ನಿಜವಾದ ದೇವಸ್ಥಾನ, ಪುಸ್ತಕವೇ ತಾಯಿ ಮತ್ತು ಪೆನ್ನೇ ತಂದೆ ಎಂಬುದನ್ನು ಮೊದಲು ಕಲಿಸಿ ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು ಉದ್ಯೋಗದಲ್ಲಿ ವಿಶೇಷ ಮೀಸಲಾತಿಯು ಇರಲಿದೆ ಎಂದು ಶಾಸಕ ಕೊತ್ತೂರು ಮಂಜುನಾಥ್ ಪೋಷಕರಿಗೆ ತಿಳಿಸಿದರು.

ತಾಲೂಕಿನ ನರಸಾಪುರದಲ್ಲಿ ಸೋಮವಾರ ಕರ್ನಾಟಕ ಪಬ್ಲಿಕ್ ಶಾಲೆಯ (ಕೆಪಿಎಸ್) 2026–27 ನೇ ಸಾಲಿನ ಶಾಲಾ ಪ್ರಾರಂಭೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು ಖಾಸಗಿ ಶಾಲೆಗಳಲ್ಲಿ ಕೇವಲ ಎಸಿ, ಸುಂದರ ಕೊಠಡಿಗಳಿರಬಹುದು. ಆದರೆ ಸರ್ಕಾರಿ ಶಾಲೆಯಲ್ಲಿ ಮತ್ತು ಗ್ರಾಮೀಣ ಭಾಗದಲ್ಲಿ ಓದುವ ಮಕ್ಕಳಿಗೆ ಸರ್ಕಾರಿ ಉದ್ಯೋಗಗಳಲ್ಲಿ ವಿಶೇಷ ಮೀಸಲಾತಿ ಸಿಗಲಿದೆ. ಈ ಸೌಲಭ್ಯ ಖಾಸಗಿ ಶಾಲೆಯ ಮಕ್ಕಳಿಗೆ ಸಿಗುವುದಿಲ್ಲ. ಪ್ರತಿದಿನ ನನ್ನ ಕಚೇರಿಗೆ ನೂರಾರು ಪೋಷಕರು ಖಾಸಗಿ ಶಾಲೆಯ ಫೀಸ್ ಕಟ್ಟಲಾಗದೆ ನೆರವಿಗಾಗಿ ಬರುತ್ತಾರೆ. ಸರ್ಕಾರದಿಂದ ಬರುವ ನನ್ನ ಸಂಬಳ ಹಾಗೂ ಗೌರವಧನದ ಒಂದು ರೂಪಾಯಿಯನ್ನೂ ನಾನು ಮನೆಗೆ ತಗೆದುಕೊಂಡು ಹೋಗದೆ, ಇಂತಹ ಬಡ ಮಕ್ಕಳ ಫೀಸ್ ಹಾಗೂ ಆಸ್ಪತ್ರೆ ಖರ್ಚಿಗಾಗಿಯೇ ಚೆಕ್ ಮೂಲಕ ವಿತರಿಸಿ ಬಿಡುತ್ತೇನೆ ಪೋಷಕರು ಖಾಸಗಿ ಶಾಲೆಯ ಭಾರ ಹೊರುವ ಬದಲು ಸರ್ಕಾರಿ ಶಾಲೆಗಳ ಸೌಲಭ್ಯ ಬಳಸಿಕೊಳ್ಳಬೇಕು ಎಂದು ಮನವಿ ಮಾಡಿದರು.ವಿದ್ಯಾಭ್ಯಾಸ ಹಾಗೂ ದೇವಸ್ಥಾನಗಳ ಅಭಿವೃದ್ಧಿಗೆ ದಾನಿಗಳು ಸದಾ ಹಗಲಿರಳು ಶ್ರಮಿಸುತ್ತಾರೆ. ಸರ್ಕಾರಿ ಶಾಲೆಯ ಮಕ್ಕಳು ತಾವೇನೂ ಖಾಸಗಿ ಶಾಲೆಗಿಂತ ಕಮ್ಮಿ ಇಲ್ಲ ಎನ್ನುವ ಆತ್ಮವಿಶ್ವಾಸದಿಂದ ಓದಬೇಕು ಎಂಬ ಒಂದೇ ಉದ್ದೇಶದಿಂದ ತಮ್ಮ ಸ್ವಂತ ಖರ್ಚಿನಲ್ಲಿ ಇಡೀ ಶಾಲೆಗೆ ಸತ್ಯನಾರಾಯಣ ಜ್ಯೂವೆಲರ್ಸ್ ಮಾಲೀಕ ವೆಂಕಟೇಶ್ ಸುಂದರವಾದ ಬಣ್ಣ ಬಳಿಸಿಕೊಟ್ಟಿದ್ದಾರೆ. ಅವರ ಈ ಜನಪರ ಸೇವೆಗೆ ಕ್ಷೇತ್ರದ ಜನತೆಯ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ಇದೇ ವೇಳೆ ನರಸಾಪುರ ಶಾಲೆಯ ಕೊಠಡಿಗಳ ಕೊರತೆ, ಕಾಂಪೌಂಡ್ ಹಾಗೂ ಆಟದ ಮೈದಾನದ ಅಭಿವೃದ್ಧಿ ಕುರಿತು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು. ಇದಕ್ಕೆ ತಕ್ಷಣವೇ ಸ್ಪಂದಿಸಿದ ಕೊತ್ತೂರು ಮಂಜುನಾಥ್ ಅವರು, ನಮ್ಮ ಭಾಗದಲ್ಲಿ ಸಾಕಷ್ಟು ಕೈಗಾರಿಕೆಗಳಿದ್ದು, ಸಿಎಆರ್ ನಿಧಿ ಲಭ್ಯವಿದೆ. ನಾನು ಖುದ್ದಾಗಿ ಉದ್ಯಮಿಗಳೊಂದಿಗೆ ಮಾತನಾಡಿ ಶೀಘ್ರದಲ್ಲೇ ಶಾಲೆಗೆ ಅಗತ್ಯವಿರುವ ಹೆಚ್ಚುವರಿ ಕೊಠಡಿ ಹಾಗೂ ಮೈದಾನದ ಕಾಮಗಾರಿಯನ್ನು ಮಾಡಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು.ಸರ್ಕಾರಿ ಶಾಲೆಯಲ್ಲಿ ಓದುತ್ತಿರುವ ಮಕ್ಕಳೇ ನಾಳಿನ ದೇಶದ ಭವಿಷ್ಯ. ಈ ಮಕ್ಕಳಲ್ಲಿಯೇ ಮುಂದಿನ ಮಹಾತ್ಮಾ ಗಾಂಧಿ, ಬಾಬಾಸಾಹೇಬ್ ಅಂಬೇಡ್ಕರ್, ಅಬ್ದುಲ್ ಕಲಾಂ ಹಾಗೂ ಸರ್ ಎಂ. ವಿಶ್ವೇಶ್ವರಯ್ಯ ಅವರು ಮೂಡಿಬರಬೇಕು. ರಾಜಕೀಯವಾಗಿ ನಮ್ಮ ಕೋಲಾರದ ಹೆಮ್ಮೆಯ ನಾಯಕರಾದ ಕೆ.ಸಿ. ರೆಡ್ಡಿ, ಬೈರೇಗೌಡರು, ಶ್ರೀನಿವಾಸಗೌಡರು, ಟಿ. ಚನ್ನಯ್ಯ ಹಾಗೂ ಲತೀಫ್ ಸಾಬ್ ಅವರಂತಹ ಮುತ್ಸದ್ದಿ ನಾಯಕರು ಈ ಶಾಲೆಗಳಿಂದಲೇ ಸೃಷ್ಟಿಯಾಗಬೇಕು. ಮಕ್ಕಳನ್ನು ಉನ್ನತ ವಿದ್ಯಾಪ್ರೇಮಿಗಳನ್ನಾಗಿ ಮಾಡಿ ಎಂದು ಕರೆ ನೀಡಿದರು.ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್ ಮಾತನಾಡಿ ಕೋಲಾರದ ಶಾಸಕರು ಇವತ್ತಿನ ರಾಜಕೀಯದ ಸಂದರ್ಭದಲ್ಲಿ ಬೇರೆ ಶಾಸಕರಂತೆ ದೆಹಲಿಗೆ ಹೋಗಿ ಮಂತ್ರಿಗೆ ಲಾಬಿ ಮಾಡಲಿಲ್ಲ ಸರ್ಕಾರಿ ಶಾಲೆಗಳ ಬಗ್ಗೆ ಇರುವ ಕಾಳಜಿಗೆ ಬಂದಿದ್ದಾರೆ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ಕೆಪಿಎಸ್ ಶಾಲೆಗಳು ಸಹಕಾರಿಯಾಗಲಿವೆ ಈಗಾಗಲೇ ಕೋಲಾರ ಕ್ಷೇತ್ರದಲ್ಲಿ ಐದು ಶಾಲೆ ಮಾತ್ರ ಇದ್ದು ಮುಂದೆ ಇನ್ನೂ ಅವಶ್ಯಕತೆ ಇರುವ ಕಡೆ ಶಾಲೆ ಮಂಜೂರು ಮಾಡಲಾಗುತ್ತದೆ ಪೋಷಕರು ಖಾಸಗಿ ಶಾಲೆಗಳ ಇಂಗ್ಲಿಷ್ ವ್ಯಾಮೋಹ ಬಿಟ್ಟು ಸರ್ಕಾರಿ ಶಾಲೆಯ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಿ ಎಂದರು




ಈ ಸಂದರ್ಭದಲ್ಲಿ ಶೃಂಗೇರಿ ಮಾದರಿಯಲ್ಲಿ ಮಕ್ಕಳಿಂದ ಅಕ್ಷರ ಅಭ್ಯಾಸ ಮಾಡಿಸಿದರು. ವಿಧ್ಯಾರ್ಥಿಗಳಿಗೆ ನೋಟ್ ಪುಸ್ತಕ ಬ್ಯಾಗ್ ಗಳನ್ನು ದಾನಿಗಳಿಂದ ಮೂಲಕ ವಿತರಿಸಲಾಯಿತು ಬಿಇಒ ಕೆ.ಶೋಭಾ, ನರಸಾಪುರ ಸೊಸೈಟಿ ಅಧ್ಯಕ್ಷ ಖಾಜಿಕಲ್ಲಹಳ್ಳಿ ಮುನಿರಾಜು, ವೇಮಗಲ್ ನರಸಾಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಉರಟ ಅಗ್ರಹಾರ ಚೌಡರೆಡ್ಡಿ,ಕೆಪಿಎಸ್ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಶ್ರೀನಿವಾಸ್, ಸತ್ಯನಾರಾಯಣ ಜ್ಯೂವೆಲರ್ಸ್ ಮಾಲೀಕ ಬಿ.ಎಸ್ ವೆಂಕಟೇಶ್, ಮುಖ್ಯೋಪಾಧ್ಯಾಯರಾದ ಗೋಪಿನಾಥ್, ಕೆ.ಎಸ್ ಜಗನ್ನಾಥ್, ಸೇರಿದಂತೆ ಕಾಂಗ್ರೆಸ್ ಮುಖಂಡರು ವಿದ್ಯಾರ್ಥಿಗಳು ಪೋಷಕರು ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE